ಸಂಪುಟ : 9 ಸಂಚಿಕೆ 21 ಪುಟ : 4 ಬೆಲೆ : 3.00 ರವಿವಾರ ಫೆಬ್ರವರಿ 18, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 21 Pages : 4 Price : 3.00 Sunday February 18, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 18 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 15,16,17 ಶಹಾಪುರ್ ಪೇಟೆ, ಜವಳಗಲ್ಲಿ ಮೀನಿನ ಮಾರ್ಕೆಟ್, ಡಿಸಿ ಮಿಲ್ ರೋಡ್, ಮಹೇಂದ್ರಕರ್ ಸರ್ಕಲ್, ಗಾಂಧಿ ಸರ್ಕಲ್, ಭಜಂತ್ರಿ ಓಣಿ, ಬಸವೇಶ್ವರ ಗುಡಿ ಲೈನ, ಗಣೇಶ ಗುಡಿ ಉಳಿದ ಭಾಗಗಳು.

ವಾರ್ಡ್ ನಂ. 16 ಹೊಂಬಳ ನಾಕಾ ಜನತಾ ಕಾಲೋನಿ, ಶೌಚಾಲಯದ ಹಿಂದಿನ ಭಾಗ, ಎಲ್ಲಮ್ಮನ ಗುಡಿ, ಮಸೂತಿ ಲೈನ್ ಉಳಿದ ಭಾಗಗಳು. ವಾರ್ಡ್ ನಂ. 22 ಅಮರೇಶ್ವರ ನಗರ, ತಾಜನಗರ. ವಾರ್ಡ್ ನಂ. 21, 22,13,19 ಕೆರಕಲಮಟ್ಟಿ, ಹಾಳದಿಬ್ಬ, ಸಿಟಿಹಾಲ್ 2 ಭಾಗಗಳು, ಕಲಬಂಡಿಯವರ ಲೈನ್, 2ನೇ ನಂ ಸ್ಕೂಲ್, ಕೊಟ್ಟೂರ ಲೈನ್, ಬೇವಿನ ಮರದಮ್ಮ, ಖಾನ ತೋಟ ಉಳಿದ ಭಾಗಗಳು. ವಾರ್ಡ್ ನಂ. 3 ಮಿಷನ್ ಕಾಂಪೌಂಡ್, ಬಣ್ಣದ ನಗರ, ಕುಂಬಾರ ಓಣಿ, ಹೊಸಪೇಟೆ ಚೌಕ್, ಪಿ ಬಿ ರೋಡ್ ಉಳಿದ ಭಾಗಗಳು.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಂಥಾಲಯಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಹುಲಕೋಟಿ ಗ್ರಾಮ ಪಂಚಾಯತ್ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಕನಿಷ್ಠ ವೇತನ ದಿನಗೂಲಿ ಆಧಾರದ ಮೇಲೆ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಯಾ ಗ್ರಾಮ ಪಂಚಾಯತ್ ಕೇಂದ್ರದಲ್ಲಿ ನಿಗದಿಪಡಿಸಿದ ಮೀಸಲಾತಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಕರೆಯಲಾಗಿದೆ.

ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಮಾರ್ಚ್ 2 ಸಂಜೆ 5.30 ರೊಳಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಶಿವಾಜಿ ಜಯಂತಿ ಹಿನ್ನೆಲೆ: ಮದ್ಯ ಮಾರಾಟ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವವನ್ನು ಆಚರಿಸುತ್ತಿದ್ದು ಸದರಿ ಮೆರವಣಿಗೆಯು ಗದಗ-ಬೆಟಗೇರಿ ಅವಳಿ ನಗರದ ಪ್ರಮುಖ ಸ್ಥಳಗಳಲ್ಲಿ ಸಾಗುವುದು ಮತ್ತು ಮೆರವಣಿಗೆ ಕಾಲಕ್ಕೆ ಅವಳಿ ನಗರದಲ್ಲಿ ಕಾನೂನು ಸುವ್ಯವಸ್ಥೆ ಮತ್ತು ಶಾಂತಿ ಪಾಲನೆ ಕಾಪಾಡಿಕೊಂಡು ಹೋಗುವ ಕುರಿತು ಮದ್ಯ ಸಾಗಾಟ ಮತ್ತು ಮಾರಾಟವನ್ನು ನಿಷೇಧಿಸುವುದು ಅವಶ್ಯವಿದೆ.

ಗದಗ ಶಹರ, ಬೆಟಗೇರಿ, ಬೆಟಗೇರಿ ಬಡಾವಣೆ , ಗದಗ ಗ್ರಾಮೀಣ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಫೆಬ್ರವರಿ 19ರ ಬೆಳಗಿನ 6 ಗಂಟೆಯಿಂದ ಫೆಬ್ರವರಿ 20ರ ಬೆಳಗಿನ 6 ಗಂಟೆಯವರೆಗೆ ಮದ್ಯ ಮಾರಾಟ ಹಾಗೂ ಮದ್ಯ ಸಾಗಾಟವನ್ನು ನಿಷೇಧಿಸಲಾಗಿದೆ.

ಸದರಿ ದಿನಗಳಂದು ಗದಗ-ಬೆಟಗೇರಿ ಅವಳಿ ನಗರ ವ್ಯಾಪ್ತಿಯಲ್ಲಿ ಬರುವ ಮದ್ಯದ ಅಂಗಡಿಗಳನ್ನು ಮೇಲ್ಕಾಣಿಸಿದ ಅವಧಿಯಲ್ಲಿ ಮುಚ್ಚತಕ್ಕದ್ದು. ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ವಲಯ ಅಬಕಾರಿ ಇನ್ಸ್‌ಪೆಕ್ಟರ್ ಹಾಗೂ ಅಬಕಾರಿ ಉಪ ಆಯುಕ್ತರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಪ್ರಕಟಣೆ ತಿಳಿಸಿದೆ.

### ಜಗಜ್ಯೋತಿ ಬಸವಣ್ಣನವರ ಭಾವಚಿತ್ರ ಅನಾವರಣಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ಬಸವಣ್ಣನ ಸಂದೇಶಗಳ ಪರಿಪಾಲನೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಗಜ್ಯೋತಿ ಬಸವಣ್ಣನವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿ ಹೆಜ್ಜೆ ಹಾಕುವುದು ಸೂಕ್ತವಾಗಿದೆ. ಮಹಾಮಾನವತಾವಾದಿ ವಿಶ್ವ ಗುರು, ಸಮ ಸಮಾಜ ಕಟ್ಟುವುದರಲ್ಲಿ ಯಶಸ್ವಿಯಾದವರು ಹಾಗೂ ಮೊಟ್ಟ ಮೊದಲನೇ ಸಂಸದೀಯ ವ್ಯವಸ್ಥೆ ಹುಟ್ಟುಹಾಕಿದವರೇ ಪೂಜ್ಯ ಬಸವಣ್ಣನವರು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶನಿವಾರದಂದು ಕರ್ನಾಟಕ ಸಾಂಸ್ಕೃತಿಕ ನಾಯಕರಾದ ಜಗಜ್ಯೋತಿ ಬಸವಣ್ಣನವರ ಭಾವಚಿತ್ರ ಅನಾವರಣಗೊಳಿಸಿ, ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಮಹಾಮಾನವತಾವಾದಿ ವಿಶ್ವ ಗುರು ಬಸವಣ್ಣರನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವು ಇತ್ತೀಚೆಗೆ ಸಾಂಸ್ಕೃತಿಕ ನಾಯಕರೆಂದು ಗುರುತಿಸಿ ಗೌರವಿಸಿ ಅಧಿಕೃತಗೊಳಿಸಿದೆ. ಬಸವಣ್ಣನವರು ರಾಜ್ಯದ ಸಾಂಸ್ಕೃತಿಕ ನಾಯಕರಾಗಿರುವುದು ನಮ್ಮ ಹೆಮ್ಮೆ ಎಂದರು.




> 12ನೇ ಶತಮಾನದಲ್ಲಿಯೇ ಬಸವಣ್ಣನವರು ಮಹಿಳಾ ಸಬಲೀಕರಣ ಹಾಗೂ ಸಮಾನತೆಗಾಗಿ ಹೋರಾಟ ನಡೆಸಿದವರಾಗಿದ್ದಾರೆ. ಪ್ರಜಾಪ್ರಭುತ್ವಕ್ಕೆ ಬಸವಣ್ಣನವರು ಭದ್ರ ಬುನಾದಿ ಹಾಕಿದವರು. ಸರ್ಕಾರದ ಐದೂ ಗ್ಯಾರಂಟಿ ಯೋಜನೆಗಳು ಕಾಯಕ ದಾಸೋಹದ ಅರ್ಥ ವ್ಯವಸ್ಥೆಯಲ್ಲಿ ಎಲ್ಲರ ಮನಸ್ಸನ್ನು ಜಾಗೃತಗೊಳಿಸುತ್ತವೆ. ಪ್ರತಿಯೊಬ್ಬರೂ ಬಸವಣ್ಣನವರ ವಿಚಾರಗಳಿಗೆ ಕೈಜೋಡಿಸುವ ಮೂಲಕ ಸಮಾಜ ಸುಧಾರಣೆಗೆ ಮುಂದಾಗಬೇಕಿದೆ.
>
> **– ಎಚ್.ಕೆ. ಪಾಟೀಲ.**
>
> ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವರು.




ಅರ್ಥಶಾಸ್ತ್ರವನ್ನು ಕಾರ್ಲ್ ಮಾರ್ಕ್ಸ್‌ಗಿಂತ ಉತ್ತಮವಾಗಿ ಮಹಾಮಾನವತಾವಾದಿ ಬಸವಣ್ಣನವರು ಬೋಧಿಸಿದ್ದಾರೆ. ದುಡಿದು ತಿನ್ನಬೇಕು, ನಿಮ್ಮ ಕಾಯಕದ ಆದಾಯದಲ್ಲಿ ದಾಸೋಹ ಮಾಡಬೇಕು, ಕಾಯಕನಿಷ್ಠ ಸಮಾಜ ನಿರ್ಮಾಣದಲ್ಲಿ ಬಸವಣ್ಣನವರ ಶ್ರಮ ಅಪರಿಮಿತವಾದದ್ದು ಎಂದು ಬಸವಣ್ಣನವರ ಆಚಾರ-ವಿಚಾರಗಳ ಬಗ್ಗೆ ಸಚಿವ ಎಚ್.ಕೆ. ಪಾಟೀಲರು ತಮ್ಮದೇ ಶೈಲಿಯಲ್ಲಿ ವಿವರಿಸಿದರು.

▶▶3ನೇ ಪುಟಕ್ಕೆ

### ಸುದ್ದಿಗೋಷ್ಠಿಯಲ್ಲಿ ಉತ್ಸವ ಸಮಿತಿ ಉಪಾಧ್ಯಕ್ಷ ಅನಿಲ್ ಅಬ್ಬಿಗೇರಿ ಮಾಹಿತಿ

# ಅದ್ದೂರಿ ಛತ್ರಪತಿ ಶಿವಾಜಿ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಫೆ. 19ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವನ್ನು ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಉತ್ಸವ ಸಮಿತಿ ಉಪಾಧ್ಯಕ್ಷ ಅನಿಲ್ ಅಬ್ಬಿಗೇರಿ ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 10 ವರ್ಷಗಳಿಂದ ಜಯಂತ್ಯುತ್ಸವವನ್ನು ಗದಗ-ಬೆಟಗೇರಿ ನಗರದಲ್ಲಿ ಅದ್ದೂರಿಯಾಗಿ ಆಚರಿಸಲಾಗುತ್ತಿದೆ. ಈ ಬಾರಿ ವಿಶೇಷವಾಗಿ ಗ್ರಾಮೀಣ ಭಾಗದವರಿಂದ ರಂಗೋಲಿ ಸ್ಪರ್ಧೆ, ಆಟೋ ಸಂಘದಿಂದ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ. ಎಲ್ಲ ಹಿಂದೂ ಸಂಘಟನೆಗಳು ಕಾರ್ಯಕ್ರಮದಲ್ಲಿ ಭಾಗವಹಿಸಬೇಕು.

ಬೆಳಗ್ಗೆ 11 ಗಂಟೆಗೆ ನಗರದ ರಾಚೋಟೇಶ್ವರ ದೇವಸ್ಥಾನದಲ್ಲಿ ಮೆರವಣಿಗೆ ಚಾಲನೆ ನೀಡಲಾಗುವುದು. ನಗರದಾದ್ಯಂತ ಮೆರವಣಿಗೆ ಸಾಗಿ, ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಮೆರವಣಿಗೆ ಮುಕ್ತಾಯಗೊಳ್ಳುವುದು. ನಂತರ ಮೈದಾನದಲ್ಲಿ ಬೃಹತ್ ಧರ್ಮಸಭೆ ನಡೆಯಲಿದೆ ಎಂದು ತಿಳಿಸಿದರು.




ಶ್ರೀರಾಮ ಸೇನೆಯ ರಾಜು ಖಾನಪ್ಪನವರ ಮಾತನಾಡಿ, ಶ್ರೀರಾಮ ಮಂದಿರ ಉದ್ಘಾಟನೆ ನಂತರ ಜಿಲ್ಲಾಡಳಿತ ರಾಮ ಮೆರವಣಿಗೆಗೆ ನಿರ್ಬಂಧ ಹೇರಿತ್ತು. ಪ್ರಸ್ತುತ ಶಿವಾಜಿ ಜಯಂತ್ಯುತ್ಸವ ಮೆರವಣಿಗೆಯಲ್ಲಿ ಶ್ರೀರಾಮ ಮೂರ್ತಿ ಮೆರವಣಿಗೆ ಮಾಡಲಾಗುವುದು. ಶ್ರೀರಾಮ ಸೇನೆ ವತಿಯಿಂದ ಒಂದು ಎಕೆರೆ ಜಾಗ ಖರೀದಿಸಲಾಗಿದೆ. ಇಲ್ಲಿ ಗೋಶಾಲೆ, ಚಿಕ್ಕದಾದ ರಾಮಮಂದಿರ, ಬಡಮಕ್ಕಳಿಗೆ ವಸತಿ ವ್ಯವಸ್ಥೆ ಮಾಲಾಗುವುದು. ಈ ಭೂಮಿಯನ್ನು ಛತ್ರಪತಿ ಶಿವಾಜಿ ಜಯಂತ್ಯುತ್ಸವ ಸಮಿತಿಯಿಂದ ಉದ್ಘಾಟಿಸಲಾಗುವುದು ಎಂದರು.

ಸಮಿತಿಯ ಅಧ್ಯಕ್ಷ ಜಗದೀಶ ಪೂಜಾರ ಮಾತನಾಡಿದರು. ಸುನೀಲ ಕಬಾಡೆ, ಅಜ್ಜನ್ನ ಮಲ್ಲಾಡದ, ರಾಜನ್ನ ಮಲ್ಲಾಡದ, ಸಹದೇವ ಗಣಾಚಾರಿ, ಕಿಶನ್ ಮೆರವಾಡೆ, ಶಿವಯೋಗಿ ಹಿರೇಮಠ, ಮಹೇಶ ರೋಖಡೆ ಇತರರು ಇದ್ದರು.

ಫೆ. 19ರಂದು ನಡೆಯುವ ಮೆರವಣಿಗೆಯಲ್ಲಿ 20 ಸಾವಿರ ಜನರಿಗೆ ಊಟದ ವ್ಯವಸ್ಥೆ ಮಾಡಲಾಗಿದೆ. ಟಾಂಗಾ ಕೂಟ್ ಸರ್ಕಲ್ ಮತ್ತು ಮೈದಾನದಲ್ಲಿ ಈ ಊಟದ ವ್ಯವಸ್ಥೆ ನಡೆಯುವುದು. ಕಳೆದ ಸಾಲಿನಿಂದ ಶಿವಪ್ರಭು ದೌಡ್ ಕಾರ್ಯಕ್ರಮ ಆರಂಭಿಸಲಾಗಿದೆ. ಶಿರಹಟ್ಟಿ ಹೊಳಲಮ್ಮ ದೇವಸ್ಥಾನದಿಂದ ರಾಚೋಟೇಶ್ವರ ದೇವಸ್ಥಾನದವರೆಗೂ ಫೆ.19ರಂದು ಜ್ಯೋತಿ ಆಗಮಿಸುವುದು. ಮೆರವಣಿಗೆ ಆರಂಭಕ್ಕೂ ಮುನ್ನ ರಾಚೋಟೇಶ್ವರ ದೇವಸ್ಥಾನಕ್ಕೆ ಬಂದು ಜ್ಯೋತಿ ಬೆಳಗಿಸಿದ ನಂತರ ಮೆರವಣಿಗೆ ಆರಂಭವಾಗುವುದು ಎಂದು ರಾಜು ಖಾನಪ್ಪನವರ ಮಾಹಿತಿ ನೀಡಿದರು.

### ಜಿಲ್ಲಾಧಿಕಾರಿಗಳ ಆದೇಶದನ್ವಯ ಕಾರ್ಯಾಚರಣೆಗಿಳಿದ ತಾಲೂಕಾಡಳಿತ

# ಅನಧಿಕೃತ ಪಂಪ್‌ಸೆಟ್‌ಗಳ ತೆರವು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಿಲ್ಲಾಧಿಕಾರಿಗಳ ಖಡಕ್ ಸೂಚನೆಯ ಹಿನ್ನಲೆಯಲ್ಲಿ ಗುರುವಾರ ಪಟ್ಟಣದ ಪುರಸಭೆ ಮುಖ್ಯಾಧಿಕಾರಿ ಉಮೇಶ ಹಡಪದ ನೇತೃತ್ವದಲ್ಲಿ ತುಂಗಭದ್ರಾ ನದಿ ಪಾತ್ರದಲ್ಲಿ ಅನಧಿಕೃತವಾಗಿ ನೀರೆತ್ತುವ ರೈತರ ಪಂಪ್‌ಸೆಟ್‌ಗಳ ತೆರವು ಕಾರ್ಯಾಚರಣೆ ನಡೆಸಲಾಯಿತು.

ಪಟ್ಟಣದಲ್ಲಿ ಬುಧವಾರ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆದ ಜನತಾ ದರ್ಶನ ಕಾರ್ಯಕ್ರಮದ ವೇಳೆ, ಪಟ್ಟಣಕ್ಕೆ ಕಳೆದ ಒಂದು ತಿಂಗಳಿನಿಂದ ನದಿ ನೀರು ಸರಬರಾಜು ನಿಂತಿದೆ. ನದಿ ನೀರು ಸಂಗ್ರಹವಾಗುವ ಜಾಕ್‌ವೆಲ್‌ನಿಂದಲೇ ರೈತರು ಹಗಲೂ-ರಾತ್ರಿ ಪಂಪ್‌ಸೆಟ್‌ಗಳ ಮೂಲಕ ದೊಡ್ಡ ಪ್ರಮಾಣದಲ್ಲಿ ನೀರೆತ್ತಿದ್ದಾರೆ. ಅಲ್ಲದೇ ಸದ್ಯದ ಪರಿಸ್ಥಿತಿಯಲ್ಲಿ ಅಲ್ಲಿ ನೀರು ಸಂಗ್ರಹವಾಗುವ ವ್ಯವಸ್ಥೆಯೂ ಇಲ್ಲ. ಸಾರ್ವಜನಿಕರು ನೀರಿಗಾಗಿ ಪರಿತಪಿಸುವಂತಾಗಿದೆ ಎಂದು ಪತ್ರಕರ್ತರು ನೀರಿನ ಸಮಸ್ಯೆಯನ್ನು ಜಿಲ್ಲಾಧಿಕಾರಿಗಳಿಗೆ ಎಳೆಎಳೆಯಾಗಿ ಬಿಡಿಸಿಟ್ಟರು.

ಪರಿಸ್ಥಿತಿಯ ಗಂಭೀರತೆಯನ್ನರಿತ ಜಿಲ್ಲಾಧಿಕಾರಿಗಳು ಕೂಡಲೇ ತಹಸೀಲ್ದಾರ, ಪುರಸಭೆ, ತಾಲೂಕಾ ಪಂಚಾಯತಿ, ಹೆಸ್ಕಾಂ ಮತ್ತು ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಅಲ್ಲಿರುವ ರೈತರ ಪಂಪ್‌ಸೆಟ್ ತೆರವುಗೊಳಿಸುವಂತೆ ಮತ್ತು ನೀರು ಸಂಗ್ರಹವಾಗುವ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದರು.



ಗುರುವಾರ ಬೆಳಿಗ್ಗೆಯೇ ನದಿಗೆ ತೆರಳಿದಾಗ ಪಟ್ಟಣಕ್ಕೆ ನೀರು ಸಂಗ್ರಹವಾಗುವ ಜಾಕ್‌ವೆಲ್ ಮತ್ತು ಅಕ್ಕಪಕ್ಕವೇ ನೂರಾರು ಪಂಪ್‌ಸೆಟ್‌ಗಳನ್ನು ನೋಡಿ ನೌಕರರು, ಸಿಬ್ಬಂದಿ ವರ್ಗ, ಪೌರಕಾರ್ಮಿಕರೊಂದಿಗೆ ತೆರಳಿ ಪಂಪ್‌ಸೆಟ್‌ಗಳನ್ನು ತೆರವುಗೊಳಿಸಿದ್ದಾರೆ. ಈ ವೇಳೆ ಆಕ್ಷೇಪವೆತ್ತಿದ ರೈತರಿಗೆ ಪಟ್ಟಣ ಸೇರಿ ಗ್ರಾಮೀಣ ಭಾಗದ ಜನರು ನೀರಿಲ್ಲದೇ ಪರಿತಪಿಸುತ್ತಿದ್ದಾರೆ. ಸದ್ಯಕ್ಕೆ ನೀರಾವರಿಗೆ ನೀರು ಬಳಸುವುದು ಬೇಡ. ತೆರವುಗೊಳಿಸುವಂತೆ ಜಿಲ್ಲಾಧಿಕಾರಿಗಳ ಆದೇಶವಿದೆ ಎಂದು ತಿಳಿ ಹೇಳಿದರು. ಬಳಿಕ ಜಾಕ್‌ವೆಲ್‌ನಲ್ಲಿ ಸಂಗ್ರಹವಾಗಿದ್ದ ಕೆಸರು, ತ್ಯಾಜ್ಯ ಸ್ವಚ್ಛಗೊಳಿಸಿದರು.

ಈ ಕುರಿತು ಮುಖ್ಯಾಧಿಕಾರಿ ಮಹೇಶ ಹಡಪದ ಪ್ರತಿಕ್ರಿಯಿಸಿ, ಜಿಲ್ಲಾಧಿಕಾರಿಗಳ ಸೂಚನೆಯಂತೆ ತುಂಗಭದ್ರಾ ನದಿ ಪಾತ್ರದಲ್ಲಿನ ನಮ್ಮ ಜಾಕ್‌ವೆಲ್‌ಗೆ ನೀರು ಹರಿದು ಬರುವ ಮಾರ್ಗದಲ್ಲಿಯೇ ಅಳವಡಿಸಿದ್ದ 15-20 ಪಂಪ್‌ಸೆಟ್‌ಗಳನ್ನು ರೈತರಿಗೆ ತಿಳಿವಳಿಕೆ ಹೇಳುವ ಮೂಲಕ ತೆರವುಗೊಳಿಸಿದ್ದೇವೆ. ಸದ್ಯಕ್ಕೆ ಪಂಪ್‌ಸೆಟ್ ಅಳವಡಿಸದಂತೆ ನಿಗಾವಹಿಸಲು ಗುತ್ತಲ ಪೊಲೀಸ್ ಠಾಣಾಧಿಕಾರಿಗಳಿಗೆ ಮಾಹಿತಿ ನೀಡಿ ಸಹಕಾರ ಕೋರಲಾಗಿದೆ. ಭದ್ರಾ ಜಲಾಶಯದಿಂದ ಬಿಟ್ಟಿರುವ ನೀರು 2 ದಿನಗಳಲ್ಲಿ ನಮ್ಮ ಭಾಗಕ್ಕೆ ತಲುಪಲಿದೆ. ನದಿಗೆ ಅಡ್ಡಲಾಗಿ ಮರಳಿನ ಚೀಲ ಅಳವಡಿಸುವುದು, ನೀರಿನ ಮಾರ್ಗ ಬದಲಾಗದಂತೆ ನೋಡಿಕೊಳ್ಳುವ ಮೂಲಕ ತಾತ್ಕಾಲಿಕವಾಗಿ ನದಿ ನೀರು ಸಂಗ್ರಹಿಸುವ ವ್ಯವಸ್ಥೆಯನ್ನೂ ಮಾಡಲಾಗುತ್ತಿದೆ. ಒಂದು ವಾರದಲ್ಲಿ ನೀರಿನ ಸಮಸ್ಯೆ ಬಗೆಹರಿಸಲಾಗುವುದು ಎಂದರು.

## ಮಳಿಗೆಗಳ ಲೀಜ್: ಬಹಿರಂಗ ಹರಾಜು


■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ ಭವನದಲ್ಲಿರುವ ಬಾಕಿ ಉಳಿದ 02 ವಾಣಿಜ್ಯ ಮಳಿಗೆಗಳನ್ನು ಬಾಡಿಗೆ ಮೂಲಕ ವಿಲೇವಾರಿ ಮಾಡಲು ಬಹಿರಂಗ ಹರಾಜು 3ನೇ ಕರೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಜಿಲ್ಲಾಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ 27 ರಲ್ಲಿ ದಿನಾಂಕ: 27-02-2024 ರ ಸಂಜೆ 5.30 ರ ವರೆಗೆ ಅರ್ಜಿಯನ್ನು ಪಡೆದು ನಿಗಧಿತ ದಾಖಲಾತಿಗಳು ಹಾಗೂ ಠೇವಣಿ ಮೊತ್ತವನ್ನು ಪಾವತಿಸಿ ಅರ್ಜಿ ಸಲ್ಲಿಸಿ, ಬಹಿರಂಗ ಹರಾಜಿನಲ್ಲಿ ಪಾಲ್ಗೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹರ್ಡೇಕರ ಮಂಜಪ್ಪ ಜಯಂತಿ ಆಚರಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ.18ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1581ನೇ ಶರಣ ಸಂಗಮದಲ್ಲಿ ಕರ್ನಾಟಕ ಗಾಂಧಿ ಹರ್ಡೇಕರ ಮಂಜಪ್ಪನವರ 138ನೇ ಜಯಂತಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಶರಣ ಎನ್.ಎಚ್. ಹಿರೇಸಕ್ಕರಗೌಡ್ರ ವಹಿಸುವರು. ಶ್ರೀ ಎ.ಸಿ. ಪದವಿಪೂರ್ವ ಕಾಲೇಜು ಬಳ್ಳಾರಿಯ ಉಪನ್ಯಾಸಕ ಪ್ರೊ. ಶಿವಾನಂದ ಪಿ.ಹೊಂಬಳ ಉಪನ್ಯಾಸ ಮಾಡುವರು.ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕಟ್ಟಡ ಕಾರ್ಮಿಕರ ಮಕ್ಕಳಿಗೆ ಲ್ಯಾಪ್‌ಟಾಪ್ ವಿತರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಕಾಲಹರಣ ಮಾಡದೆ ಶ್ರದ್ಧೆಯಿಂದ, ಕಠಿಣ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ಸರ್ಕಾರ ನೀಡಿದ ಲ್ಯಾಪ್‌ಟಾಪ್‌ಗಳನ್ನು ಜ್ಞಾನಾರ್ಜನೆಗೆ ಬಳಸಿಕೊಳ್ಳಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿಯಲ್ಲಿ ಉತ್ತಮ ಫಲಿತಾಂಶವನ್ನು ಪಡೆದ ನೋಂದಾಯಿತ ಕಟ್ಟಡ ಮತ್ತು ಇತರೆ ಕಾರ್ಮಿಕರ ಮಕ್ಕಳಿಗೆ ಶನಿವಾರ ಲ್ಯಾಪ್‌ಟಾಪ್‌ಗಳನ್ನು ವಿತರಿಸಿ ಅವರು ಮಾತನಾಡಿದರು.

ಇಲಾಖೆಯಿಂದ 140 ಮಕ್ಕಳಿಗೆ ಲ್ಯಾಪ್ ಟಾಪ್ ಮಂಜೂರಾಗಿದ್ದು, ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ 22 ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ, ಗಣ್ಯರುಗಳಾದ ಜಿ.ಎಸ್. ಗಡ್ಡದೇವರಮಠ, ಸಿದ್ದು ಪಾಟೀಲ್, ಪ್ರೊ. ಕೆ.ಎಚ್. ಬೇಲೂರ, ಎಸ್.ಎನ್. ಬಳ್ಳಾರಿ, ಬಸವರಾಜ ಕಡೆಮನಿ, ಪ್ರಭು ಬುರಬುರೆ, ಕಾರ್ಮಿಕ ಇಲಾಖೆಯ ಅಧಿಕಾರಿ ಬಿ.ಆರ್. ಜಾಧವ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಂಘ-ಸಂಸ್ಥೆಯವರು ಹಾಜರಿದ್ದರು.

## ಸಂಪಾದಕೀಯ

### ಇಂಥ ಸದಸ್ಯರು ಮತ್ತೆ ಸದನಕ್ಕೆ ಹೋಗಬೇಕಾ?

ದೇಶದಲ್ಲಿ ಈಗ ಲೋಕಸಭೆ ಚುನಾವಣೆಯದ್ದೆ ಬಹುದೊಡ್ಡ ಚರ್ಚೆ. ಕರ್ನಾಟಕದ ಮಟ್ಟಿಗಂತು ಲೋಕಸಭೆ ಚುನಾವಣೆ ಎನ್ನುವುದು ಬಿಜೆಪಿಗೆ ಬಹುದೊಡ್ಡ ಸವಾಲು ಎನ್ನುವಂತಾಗಿದೆ. ವಿಧಾನಸಭೆ ಚುನಾವಣೆಯಲ್ಲಿ ಸೋತು ಸಣ್ಣವಾಗಿರುವ ಬಿಜೆಪಿಗೆ, ಲೋಕಸಭೆ ಚುನಾವಣೆಯನ್ನು ಒಂದು ಪ್ರತಿಷ್ಠೆಯ ಕಣವನ್ನಾಗಿ ಸ್ವೀಕರಿಸಿದೆ.

ಬಿಜೆಪಿಯ 24 ಸಂಸದರು ಲೋಕಸಭೆಯಲ್ಲಿದ್ದಾರೆ. ಆ ಪೈಕಿ ಉತ್ತರ ಕನ್ನಡ ಜಿಲ್ಲೆಯ ಹಿಂದೂ ಫೈರ್ ಬ್ರಾಂಡ್ ಎಂದು ಬಿಂಬಿಸಿಕೊಳ್ಳುತ್ತಿರುವ ಅನಂತಕುಮಾರ್ ಹೆಗಡೆ ಸಹಿತ ನಾಲ್ವರು ಲೋಕಸಭೆ ಸದಸ್ಯರು ಸಂಸತ್ ಅಧಿವೇಶನದಲ್ಲಿ ಒಂದೇ ಒಂದು ಪ್ರಶ್ನೆ ಕೇಳಿಲ್ಲ. ಇನ್ನು ಚರ್ಚೆಗಳಲ್ಲಿ ಭಾಗವಹಿಸುವ ಮಾತೇ ಇಲ್ಲ.

ಉತ್ತರ ಕನ್ನಡ ಸಂಸದ ಅನಂತಕುಮಾರ್ ಹೆಗಡೆ, ಆರು ಬಾರಿ ಸಂಸದರಾಗಿರುವ ಚಾಮರಾಜನಗರದ

ಬಿ ಶ್ರೀನಿವಾಸ್ ಪ್ರಸಾದ್, ವಿಜಯಪುರ ಸಂಸದ ರಮೇಶ್ ಜಿಗಜಣಗಿ, ಚಿಕ್ಕಬಳ್ಳಾಪುರದ ಲೋಕಸಭೆ ಸದಸ್ಯ ಬಚ್ಚೇಗೌಡ, ತಮ್ಮ 5 ವರ್ಷದ ಅಧಿಕಾರ ಅವಧಿಯಲ್ಲಿ ಒಮ್ಮೆಯೂ ಒಂದೇ ಒಂದು ಪ್ರಶ್ನೆ ಕೇಳುವ ಸೌಜನ್ಯ ತೋರಿಲ್ಲ.

ಕೇಂದ್ರ ಮಂತ್ರಿಯಾಗಿದ್ದಂತಹ ಬಿ ಶ್ರೀನಿವಾಸ್ ಪ್ರಸಾದ್ ಅವರಂತಹ ಹಿರಿಯ ರಾಜಕಾರಣಿಗಳು, ಲೋಕಸಭೆಯಲ್ಲಿ ಸಕ್ರಿಯರಾಗಿ ಭಾಗವಹಿಸದೇ ಇರುವುದು ಅತ್ಯಂತ ನೋವಿನ ಸಂಗತಿ. ಕೇಂದ್ರದಲ್ಲಿ ತಮ್ಮದೇ ಪಕ್ಷ ಅಧಿಕಾರದಲ್ಲಿದ್ದರೂ ಸಕ್ರಿಯವಾಗಿ ಚರ್ಚೆಗಳಲ್ಲಿ ತೊಡಗಿಲ್ಲ ಎಂದರೆ ಯಾವ ಪುರುಷಾರ್ಥಕ್ಕಾಗಿ ಲೋಕಸಭೆಗೆ ಹೋಗಿದ್ದಾರೆ ಎನ್ನುವುದು ಅರ್ಥವಾಗುತ್ತಿಲ್ಲ.

ಇನ್ನು ಕರಾವಳಿ ಭಾಗದಲ್ಲಿ ವಿವಾದಾತ್ಮಕ ಹೇಳಿಕೆಗಳ ಮೂಲಕವೇ ಶಾಂತಿ ಸುವ್ಯವಸ್ಥೆಯನ್ನ ಹಾಳು ಮಾಡಿ ರಾಜಕಾರಣ ಮಾಡುವ ಅನಂತ್ ಕುಮಾರ್ ಹೆಗಡೆ, ತಮ್ಮ ಪೌರುಷವನ್ನು ಲೋಕಸಭೆಯಲ್ಲಿ ಪ್ರದರ್ಶಿಸಬೇಕಿತ್ತು. ಸಂಸದ ಅನಂತ್ ಕುಮಾರ್ ಹೆಗಡೆ ಪ್ರಶ್ನೆ ಕೇಳುವುದು ಬಿಡಿ, ಸಂಸತ್ ಕಲಾಪಕ್ಕೂ ಹಾಜರಾಗದೆ ದೂರ ಉಳಿದಿದ್ದು ಎಲ್ಲರಿಗೂ ಗೊತ್ತಿರುವ ವಿಚಾರವೇ.

ಸದ್ಯ ಲೋಕಸಭೆ ಚುನಾವಣೆ ಮತ್ತೆ ಹತ್ತಿರ ಬಂದಿದೆ. ಈ ನಾಲ್ವರು ಸಂಸದರು ಮತ್ತೊಮ್ಮೆ ಬಿಜೆಪಿಯಿಂದ ಕಣಕ್ಕಿಳಿಯುವ ಸಾಧ್ಯತೆಗಳು ಹೆಚ್ಚಿವೆ. ಆದರೆ ಜನ ಈ ಬಾರಿ ತಮ್ಮ ಸಂಸದರ ಸಾಧನೆಯನ್ನ ಪರಾಮರ್ಶೆ ಮಾಡಿ ಬೆಂಬಲಿಸುವ ನಿರ್ಣಯ ಕೈಗೊಳ್ಳಬೇಕು. ಪ್ರಬುದ್ಧ ಮತದಾರರು ಒಮ್ಮೆಯಾದರೂ ತಮ್ಮ ವಿವೇಚನೆಯನ್ನು ಬಳಸಬೇಕಿದೆ.

ಫೆ.19, ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ನಿಮಿತ್ತ ಸಾಂದರ್ಭಿಕ ಲೇಖನ

# ಹಿಂದವೀ ಸಾಮ್ರಾಜ್ಯದ ಸ್ಥಾಪಕ ಶಿವಾಜಿ

'ಪ್ರತಿಯೊಬ್ಬ ವ್ಯಕ್ತಿಯು ಶಿಕ್ಷಣವನ್ನು ಪಡೆಯಬೇಕು, ಏಕೆಂದರೆ ಯುದ್ಧದ ಸಮಯದಲ್ಲಿ ಶಕ್ತಿಯಿಂದ ಸಾಧಿಸಲಾಗದ ಜಯವನ್ನು, ಜ್ಞಾನ ಮತ್ತು ತಂತ್ರಗಳಿಂದ ಸಾಧಿಸಬಹುದು ಮತ್ತು ಜ್ಞಾನವು ಶಿಕ್ಷಣದಿಂದ ಬರುತ್ತದೆ' ಎಂದವರು ಛತ್ರಪತಿ ಶಿವಾಜಿ ಮಹಾರಾಜರು.

ಛತ್ರಪತಿ ಶಿವಾಜಿ ಮಹಾರಾಜರು ಭಾರತದ ಮಹಾನ್ ಯೋಧ ಮತ್ತು ತಂತ್ರಜ್ಞರಾಗಿದ್ದರು. ಇವರು ಅತ್ಯಂತ ಧೈರ್ಯಶಾಲಿ ಸಾಮ್ರಾಟನಾಗಿದ್ದು, ಭಾರತದಾದ್ಯಂತ ಮರಾಠ ಸಾಮ್ರಾಜ್ಯವನ್ನು ಸ್ಥಾಪಿಸಿ, ವಿಸ್ತರಿಸಿದ ಕೀರ್ತಿ ಇವರದ್ದು. ಶಿವಾಜಿ ಅವರು ತಮ್ಮ ಜೀವಿತಾವಧಿಯಲ್ಲಿ ತನ್ನ ಸಾಮ್ರಾಜ್ಯವನ್ನು ಮೊಘಲರಿಂದ ಕಾಪಾಡಿಕೊಳ್ಳಲು ಅನೇಕ ವರ್ಷಗಳ ಕಾಲ ಹೋರಾಡಿದ್ದರು. ಇನ್ನು ಕೆಲವರು ಛತ್ರಪತಿ ಶಿವಾಜಿಯನ್ನು ದೇವರೆಂದೇ ಪರಿಗಣಿಸುತ್ತಾರೆ. ದಕ್ಷಿಣ ಭಾರತದಲ್ಲಿ ಇಂದಿಗೂ ಕೂಡ ಪ್ರಾಚೀನ ಹಿಂದೂ ದೇವಾಲಯಗಳು ಉಳಿದಿದೆಯೆಂದರೆ ಅದಕ್ಕೆ ಮುಖ್ಯ ಕಾರಣ ಛತ್ರಪತಿ ಶಿವಾಜಿಯ ನ್ಯಾಯಯುತ ಆಡಳಿತವೇ ಆಗಿದೆ.

> ಶಿವಾಜಿ ಗೆರಿಲ್ಲಾ ಯುದ್ಧದ ಪ್ರತಿಪಾದಕರಾಗಿದ್ದರು. ಅವರು ತಮ್ಮ ಪ್ರದೇಶದ ಭೌಗೋಳಿಕತೆ, ಗೆರಿಲ್ಲಾ ತಂತ್ರಗಳು, ಶತ್ರುಗಳೊಂದಿಗೆ ಸಣ್ಣ ಗುಂಪುಗಳ ಮೇಲೆ ದಾಳಿ ಮಾಡುವುದು ಇತ್ಯಾದಿಗಳನ್ನು ಚೆನ್ನಾಗಿ ತಿಳಿದಿದ್ದರು ಮತ್ತು ಅವರನ್ನು ಬೆಟ್ಟಗಳ ಇಲಿ ಎಂದು ಕರೆಯಲಾಯಿತು. ಆದಾಗ್ಯೂ, ಶಿವಾಜಿ ಎಂದಿಗೂ ಧಾರ್ಮಿಕ ಸ್ಥಳಗಳು ಅಥವಾ ಅಲ್ಲಿ ವಾಸಿಸುವ ಜನರ ಮನೆಗಳ ಮೇಲೆ ದಾಳಿ ಮಾಡಲಿಲ್ಲ. ಈ ಕಾರಣಕ್ಕಾಗಿ, ಅವನ ಸೈನ್ಯಕ್ಕೆ ವೈಯಕ್ತಿಕ ಕುದುರೆಗಳು ಮತ್ತು ಶಸ್ತ್ರಾಸ್ತ್ರಗಳನ್ನು ಒದಗಿಸಲಾಗಿಲ್ಲ.



ಛತ್ರಪತಿ ಶಿವಾಜಿ ಮಹಾರಾಜರ ಹೆಸರು ಭಾರತದ ಚರಿತ್ರೆಯಲ್ಲಿ ಅಗ್ರಪಂಕ್ತಿಯಲ್ಲಿ ನಿಲ್ಲುವಂತದ್ದು. ಅಪ್ರತಿಮ ಯೋಧರೆನ್ನಿಸಿಕೊಂಡು ಹದಿಹರೆಯದಲ್ಲಿಯೇ ಯುದ್ಧಭೂಮಿಯಲ್ಲಿ ಪರಾಕ್ರಮ ಪ್ರದರ್ಶಿಸಿ ಮರಾಠ ರಾಜ್ಯ ಸ್ಥಾಪಿಸಿದ ಶಿವಾಜಿ ಮಹಾರಾಜ ಸ್ವಾಭಿಮಾನಿ ರಾಷ್ಟ್ರ ನಿರ್ಮಾಣದ ಕನಸು ಕಂಡವರು.

ಛತ್ರಪತಿ ಶಿವಾಜಿ ಮಹಾರಾಜ ಅಥವಾ ಶಿವಾಜಿರಾಜೆ ಶಹಾಜಿರಾಜೆ ಭೋಂಸ್ಲೆ, ಫೆಬ್ರುವರಿ 19,1630ರಂದು ಮಹಾರಾಷ್ಟ್ರದ ಪುಣೆಯ ಸಮೀಪದ ಶಿವನೇರಿ ಎಂಬಲ್ಲಿ ಜನಿಸಿದರು. 1674ರಲ್ಲಿ, ಅವರು ಪಶ್ಚಿಮ ಭಾರತದಲ್ಲಿ ಮರಾಠ ಸಾಮ್ರಾಜ್ಯದ ಅಡಿಪಾಯವನ್ನು ಹಾಕಿದರು. ಅವರನ್ನು ಭಾರತೀಯ ನೌಕಾಪಡೆಯ ಪಿತಾಮಹ ಎಂದೂ ಕರೆಯುತ್ತಾರೆ. ಛತ್ರಪತಿ ಶಿವಾಜಿ ಸ್ಥಾಪಿಸಿದ ಮರಾಠಾ ರಾಜ್ಯವು 1818ರವರೆಗೂ ರಾರಾಜಿಸಿತು.

ಶಿವಾಜಿಗೆ ಪೂರ್ಣಪ್ರಮಾಣದ ಯುದ್ಧ ಕೌಶಲವನ್ನು ಧಾರೆ ಎರೆದವರು ದಾದಾಜಿ ಕೊಂಡದೇವ. ಕತ್ತಿವರಸೆ, ಕುದುರೆ ಸವಾರಿ, ಯುದ್ಧಕಲೆಗಳನ್ನು ಕರಗತ ಮಾಡಿಕೊಂಡ ಶಿವಾಜಿ 17ನೇ ವಯಸ್ಸಿಗೆ ತೋರಣದುರ್ಗ ವಶಪಡಿಸಿಕೊಂಡು ಮಹತ್ವಾಕಾಂಕ್ಷೆಯ ಹೆಜ್ಜೆಗಳನ್ನು ಇಡಲು ಆರಂಭಿಸಿದ್ದರು. ಎಳೆಯ ವಯಸ್ಸಿನಿಂದಲೇ ತಾಯಿ ಜೀಜಾಬಾಯಿಯಿಂದ ಜೀವನ ಮೌಲ್ಯಗಳ ಶಿಕ್ಷಣ ಪಡೆದಿದ್ದ ಶಿವಾಜಿ ಸಂತ ರಾಮದಾಸರ ಪರಮಭಕ್ತರಾಗಿದ್ದರು.

ಶಿವಾಜಿ ಮಹಾರಾಜರು ಕರುಣಾಮಯಿ ಮತ್ತು ತನ್ನ ಸೈನ್ಯದಲ್ಲಿ ಶರಣಾಗುವ ಯಾರನ್ನಾದರೂ ಸ್ವಾಗತಿಸಿದರು. ಯಾರನ್ನೂ ಅವರ ಹಿನ್ನೆಲೆಯ ಮೇಲೆ ನಿರ್ಣಯಿಸಲಾಗಿಲ್ಲ, ಬದಲಿಗೆ, ಅವರ ಕೌಶಲ್ಯಗಳ ಮೇಲೆ ಅವರನ್ನು ನಿರ್ಣಯಿಸಲಾಯಿತು. ಅವರು ಅತ್ಯಂತ ಕಾಳಜಿಯುಳ್ಳವರಾಗಿದ್ದರು ಮತ್ತು ಧಾರ್ಮಿಕ ಸ್ಥಳಗಳು ಮತ್ತು ಸಾಮಾನ್ಯ ಜನರ ಮನೆಗಳ ಮೇಲೆ ಎಂದಿಗೂ ದಾಳಿ ಮಾಡಲಿಲ್ಲ. 1674ರಲ್ಲಿ ರಾಯಘಡದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಕಿರೀಟಧಾರಣೆ ನಡೆಯಿತು.

ಕಿರೀಟಧಾರಣೆಯ ಬಳಿಕ ಛತ್ರಪತಿ ಶಿವಾಜಿ ಮಹಾರಾಜ್ ಇಡೀ ಪಶ್ಚಿಮಭಾರತವನ್ನು ತಮ್ಮ ಆಳ್ವಿಕೆಗೆ ತಂದರು. ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿದ ಶಿವಾಜಿ 1680ರಲ್ಲಿ ಕಾಲವಾದರೂ ಅವರು ಸ್ಥಾಪಿಸಿದ ಮರಾಠರಾಜ್ಯ 1818ರವರೆಗೆ ಉಜ್ವಲವಾಗಿ ಬೆಳಗಿತು ಎನ್ನಲಾಗಿದೆ.

ಶಿವಾಜಿ ಜಾತಿ-ಸಂಘರ್ಷಗಳ ವಿರುದ್ಧವಾಗಿದ್ದರು. ಆದರೆ, ಯಾವುದೇ ಧರ್ಮದ ವಿರುದ್ಧ ಅಲ್ಲ. ಆ ಸಮಯದಲ್ಲಿ, ಭಾರತದಲ್ಲಿನ ಎಲ್ಲಾ ರಾಜ್ಯಗಳು ತಮ್ಮ ಧಾರ್ಮಿಕ ನಂಬಿಕೆಗಳಿಗೆ ಅಂಟಿಕೊಳ್ಳುತ್ತಿದ್ದಾಗ, ಶಿವಾಜಿ ಎಲ್ಲಾ ಧರ್ಮಗಳನ್ನು ಒಪ್ಪಿಕೊಂಡರು. ಶಿವಾಜಿ ಮಹಾರಾಜರು ಎಲ್ಲಾ ಧರ್ಮಗಳಿಗೆ ಅವಕಾಶ ನೀಡಿದ್ದರೂ, ಅವರು ತಮ್ಮ ಸ್ವಂತ ಧಾರ್ಮಿಕ ನಂಬಿಕೆಗಳಲ್ಲಿ ಎಂದಿಗೂ ರಾಜಿ ಮಾಡಿಕೊಂಡಿಲ್ಲ. ವಾಸ್ತವವಾಗಿ, ಅವರು ಹಿಂದೂ ಧರ್ಮಕ್ಕೆ ಮತಾಂತರಗೊಳ್ಳಲು ಬಯಸುವ ಜನರಿಗೆ ಸಹಾಯ ಮಾಡಿದರು.

ಒಟ್ಟಾರೆಯಾಗಿ ಛತ್ರಪತಿ ಶಿವಾಜಿ ಮಹಾರಾಜರು ಮರಾಠಾ ಸಾಮ್ರಾಜ್ಯವನ್ನು ಒಪ್ಪಿಕೊಂಡರು ಅಷ್ಟೇ ಅಲ್ಲದೇ ಜನರ ಹೃದಯವನ್ನು ಆಳಿದರು. ಅವರು ಭಾರತೀಯ ಇತಿಹಾಸದ ಶ್ರೇಷ್ಠ ರಾಜರಲ್ಲಿ ಒಬ್ಬರು. ಅವರ ಸಾಧನೆಗಳು ಮುಂಬರುವ ಪೀಳಿಗೆಗೆ ಹೆಮ್ಮೆಯ ಭಾಗವಾಗಿದೆ.



**– ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ-ಶಿರಹಟ್ಟಿ, ಲಕ್ಷ್ಮೇಶ್ವರ.

## ಸಾಲದ ಸುಳಿಯಲ್ಲಿ ಕರ್ನಾಟಕ

■ವಿಜಯಸಾಕ್ಷಿ ಸುದ್ದಿ, ಗದಗ



ಅಧಿಕಾರಕ್ಕೆ ಬಂದು ಕೇವಲ 9 ತಿಂಗಳಲ್ಲಿ ಸುಮಾರು 1,93,246 ಕೋಟಿ ರೂ ಸಾಲ ಮಾಡಿ ಪ್ರತಿಯೊಬ್ಬ ಕನ್ನಡಿಗನ ಮೇಲೆ 28 ಸಾವಿರ ರೂ ಸಾಲ ಹೊರಿಸಿ, ಹಿಂದು ಸಮುದಾಯದ ತುಷ್ಟೀಕರಣಕ್ಕಾಗಿ, ಕೆಲವು ಸಮುದಾಯಗಳ ಓಲೈಕೆಗಾಗಿ ಲಕ್ಷಾಂತರ ಕೋಟಿ ಸಾಲ ಮಾಡಿ ರಾಜ್ಯದ ಜನರನ್ನು ಸಂಪೂರ್ಣವಾಗಿ ಸಾಲದ ಸುಳಿಗೆ ಸಿಲುಕಿಸಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಬೇಸರ ವ್ಯಕ್ತಪಡಿಸಿದ್ದಾರೆ.

ಬಹುಸಂಖ್ಯಾತ ಹಿಂದೂಗಳನ್ನು ಗುರಿಯಾಗಿಸಿಕೊಂಡು ಕೇವಲ ಮುಸ್ಲಿಂ ಮತ್ತು ಕ್ರಿಶ್ಚಿಯನ್ ಧರ್ಮಗಳ ಒಲೈಕೆ ಮಾಡುವ ಬಜೆಟ್ ಇದಾಗಿದೆ. ವಾಣಿಜ್ಯ ತೆರಿಗೆ 58%, ಅಬಕಾರಿ ಸುಂಕ 20%, ನೊಂದಣಿ ಮುದ್ರಾಂಕ 14%, ಮೋಟರ್ ವಾಹನ ತೆರಿಗೆ 7%, ಇತರೆ 1% ಹೆಚ್ಚಳ ಮಾಡುವುದರ ಮೂಲಕ ರಾಜ್ಯದ ಜನತೆಗೆ ಅನ್ಯಾಯವನ್ನು ಎಸಗಿದ್ದಾರೆ. ಇದು ಬಜೆಟ್ ಆಗಿರದೆ, ರಾಜ್ಯದ ಜನತೆ ಕಿವಿಯ ಮೇಲೆ ಹೂವಿನ ತೋಟ ಇಟ್ಟಂತಾಗಿದೆ ಎಂದಿದ್ದಾರೆ.

## ಸಕಾರಾತ್ಮಕ ಭರವಸೆ: ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ



ಸಿಎಂ ಸಿದ್ದರಾಮಯ್ಯನವರು ಶುಕ್ರವಾರ ವಿಧಾನಸಭೆಯಲ್ಲಿ ಮಂಡಿಸಿರುವ ಪ್ರಸಕ್ತ ಸಾಲಿನ ಮುಂಗಡಪತ್ರದಲ್ಲಿ ರಾಜ್ಯ ಸರಕಾರಿ ನೌಕರರ ವೇತನ ಪರಿಷ್ಕರಣೆ, 7ನೇ ವೇತನ ಆಯೋಗ ಸಿದ್ದಪಡಿಸಿರುವ ವರದಿಯನ್ನು ಸ್ವೀಕರಿಸಿದ ನಂತರದಲ್ಲಿ ಅದನ್ನು ಪರಿಶೀಲಿಸಿ ಕ್ರಮ ವಹಿಸುವ ಬಗ್ಗೆ ಸಕಾರಾತ್ಮಕವಾಗಿ ಭರವಸೆ ನೀಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರವನ್ನ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ ಅಭಿನಂಧಿಸಿದ್ದಾರೆ.

## ಬೆಲೆ ಏರಿಕೆಯ ಬಿಸಿ ನೀಡಿದ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಸಿಎಂ ಸಿದ್ದರಾಮಯ್ಯನವರು ಮಂಡಿಸಿದ ಮುಂಗಡಪತ್ರದಲ್ಲಿ ಜನರಿಗೆ ಅನುಕೂಲವಾಗುವ ಯಾವುದೇ ಯೋಜನೆಗಳನ್ನು ನೀಡಿಲ್ಲ. ಕೃಷಿಗೆ ಸಂಬಂಧಿದಂತೆ ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳು, ರಾಜ್ಯದ ನಗರದ ಮೂಲಭೂತ ಸೌಲಭ್ಯಗಳಾದ ರಸ್ತೆ, ಕುಡಿಯುವ ನೀರಿನ ಯೋಜನೆ, ಒಳಚರಂಡಿ, ರಸ್ತೆ, ಅಭಿವೃದ್ಧಿಗಾಗಿ ಯಾವುದೇ ಅಭಿವೃದ್ಧಿ ಕಾರ್ಯಗಳಿಗೆ ಹಣ ಮೀಸಲಿಟ್ಟಿಲ್ಲ ಎಂದು ಗದಗ ಜಿಲ್ಲಾ ವಿಕಾಸ ವೇದಿಕೆಯ ಅಧ್ಯಕ್ಷ ವಿಶ್ವನಾಥ ಖಾನಪೂರ ಅಭಿಪ್ರಾಯಪಟ್ಟಿದ್ದಾರೆ. ಗದಗ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಬೇಕಾದಷ್ಟು ಭೂಮಿ ಇರುವುದು ಇಲ್ಲಿ ಕೈಗಾರಿಕೆ ಸ್ಥಾಪನೆಗೆ ಅನುಕೂಲ ಕಲ್ಪಿಸಿದ್ದರೆ ಈ ಭಾಗದ ನಿರುದ್ಯೋಗಿ ಯುವಕರಿಗೆ ಅನುಕೂಲವಾಗುತ್ತಿತ್ತು. ನಗರದ ಒಳಚರಂಡಿ ಹಾಗೂ ಕುಡಿಯುವ ನೀರಿನ ಯೋಜನೆಗೂ ಅನುದಾನ ನೀಡದಿರುವುದು ನಿರಾಶೆ ಮೂಡಿಸಿದೆ ಎಂದಿದ್ದಾರೆ.

ಪುರಸಭೆಯಲ್ಲಿ ಬಜೆಟ್ ಸಿದ್ಧತೆ ಕುರಿತು ಪೂರ್ವಭಾವಿ ಸಭೆ

## ನೀರಿನ ಬವಣೆ ನೀಗಿಸಲು ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಪಟ್ಟಣದಲ್ಲಿ ಬಹುದಿನಗಳಿಂದ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಈ ಬಾರಿಯ ಪುರಸಭೆ ಬಜೆಟ್‌ನಲ್ಲಿ ವಿಶೇಷ ಅನುದಾನ ಕಲ್ಪಿಸಬೇಕು ಎಂದು ಪುರಸಭೆಯ ಸದಸ್ಯರು ಒಕ್ಕೊರಲಿನ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಪುರಸಭೆ ಸಭಾ ಭವನದಲ್ಲಿ ಬಜೆಟ್ ಸಿದ್ಧತೆ ಕುರಿತು ಗುರುವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಬಹುತೇಕ ಸದಸ್ಯರು ನೀರಿನ ಬವಣೆಯ ಕುರಿತು ತಮ್ಮ ಕಳವಳ ವ್ಯಕ್ತಪಡಿಸಿ, ಬಜೆಟ್‌ನಲ್ಲಿ ನೀರಿನ ಸೌಲಭ್ಯಕ್ಕಾಗಿ ಹೆಚ್ಚಿನ ಅನುದಾನ ಮೀಸಲಿಡುವಂತೆ ಸೂಚಿಸಿದರು. ಪಟ್ಟಣದಲ್ಲಿ ಬೇಸಿಗೆ ಆರಂಭದಲ್ಲಿಯೇ ನೀರಿನ ಸಂಕಷ್ಟ ಎದುರಾಗಿದ್ದು, ಟ್ಯಾಂಕರ್‌ಗಳ ಮೂಲಕ ನೀರು ಒದಗಿಸುವುದಕ್ಕೆ ಮುಂದಾಗಬೇಕು. ಇದಕ್ಕೆ ಬಜೆಟ್‌ನಲ್ಲಿ ಸೂಕ್ತ ಅನುದಾನ ತೆಗೆದಿರಿಸಬೇಕು ಎಂದು ಪುರಸಭೆ ಸದಸ್ಯರಾದ ಪ್ರವೀಣ ಬಾಳಿಕಾಯಿ, ಅಶ್ವಿನಿ ಅಂಕಲಕೋಟಿ, ಎಸ್.ಕೆ. ಹವಾಲ್ದಾರ, ಪೂಜಾ ಖರಾಟೆ ಅಭಿಪ್ರಾಯ ಮಂಡಿಸಿದರು.

ಸಾರ್ವಜನಿಕರ ಪರವಾಗಿ ರೈತ ಮುಖಂಡ ಟಾಕಪ್ಪ ಸಾತಪೂತೆ ಮಾತನಾಡಿ, ಬಜೆಟ್‌ನಲ್ಲಿ ಮೂಲ ಸೌಲಭ್ಯಗಳಾದ ರಸ್ತೆ, ಚರಂಡಿ, ಬೀದಿದೀಪ, ಕುಡಿಯುವ ನೀರಿಗೆ ಆದ್ಯತೆ ನೀಡುವ ಕಾರ್ಯವಾಗಲಿ. ಬಜೆಟ್‌ನ ಯೋಜನೆಗಳು ಅನುಷ್ಠಾನಗೊಳ್ಳಬೇಕು. ಪಟ್ಟಣ ವ್ಯಾಪ್ತಿಯಲ್ಲಿ ಸೌಲಭ್ಯ ಪಡೆಯುತ್ತಿರುವ ಕೆಲ ಬಡಾವಣೆಗಳನ್ನು ಪುರಸಭೆಯ ಅಧೀನಕ್ಕೆ ತೆಗೆದುಕೊಳ್ಳಬೇಕು ಎಂದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ಬಜೆಟ್‌ನಲ್ಲಿ ಸದಸ್ಯರು ಮತ್ತು ಸಾರ್ವಜನಿಕರು ಸೂಚಿಸಿದ ಅವಶ್ಯಕ ಅಂಶಗಳನ್ನು ಸೇರಿಸಲಾಗುವುದು. ನೀರು, ರಸ್ತೆ ಸೇರಿ ಮೂಲಭೂತ ಸೌಲಭ್ಯ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

> ಕಂದಾಯ ಅಧಿಕಾರಿ ಶಿವಾನಂದ ಅಜ್ಜಣ್ಣವರ, ಉದ್ಯಾನವನಗಳನ್ನು ಅಭಿವೃದ್ಧಿಪಡಿಸುವದರ ಜತೆಗೆ ರಾಕ್ ಗಾರ್ಡನ್ ಮಾದರಿಯಲ್ಲಿ ಆದಾಯ ಪೂರಕವಾಗುವ ಗಾರ್ಡನ್ ನಿರ್ಮಿಸುವ ಯೋಜನೆ ಪುರಸಭೆಗಿರುವದರಾಗಿ ಹೇಳಿದರು. ನೀರಿನ ಕುರಿತು ಸದಸ್ಯರ, ಸಾರ್ವಜನಿಕರ ಹೇಳಿಕೆಗಳಿಗೆ ಕಿರಿಯ ಇಂಜಿನಿಯರ್ ಜಗದೀಶ ಉಳ್ಳಟ್ಟಿ ಪ್ರತಿಕ್ರಿಯಿಸಿ, ಜಿಲ್ಲಾಧಿಕಾರಿಗಳಿಂದ ಈ ಕುರಿತಂತೆ ಆದೇಶವಿದ್ದು ಅಗತ್ಯ ಕ್ರಮ ಕೈಗೊಳ್ಳುವದಾಗಿ ಹೇಳಿದರು.

ಪುರಸಭೆ ಸದಸ್ಯರಾದ ವಾಣಿ ಹತ್ತಿ, ಜಯಕ್ಕ ಅಂದಲಗಿ, ಯಲ್ಲವ್ವ ದುರ್ಗಣ್ಣವರ, ಮುಸ್ತಾಕ ಶಿರಹಟ್ಟಿ, ನೀಲಮ್ಮ ಮೆಣಸಿನಕಾಯಿ, ಮಹಾದೇವಪ್ಪ ಅಣ್ಣಿಗೇರಿ, ಫಿರ್ದೋಶ ಆಡೂರ, ಮಂಜವ್ವ ನಂದೆಣ್ಣವರ, ಎಂ.ಎಂ. ಗದಗ, ಪೈಮ್ ಪಲ್ಲಿ ಮುಂತಾದವರಿದ್ದರು. ಮಹೇಶ ಹೊಸಮನಿ ನಿರೂಪಿಸಿದರು.

## ಕೆಂಚಮ್ಮದೇವಿ ಮೂರ್ತಿ ಪ್ರತಿಷ್ಠಾಪನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದಲ್ಲಿ ನೂರಾರು ವರ್ಷಗಳಿಂದ ಪೂಜೆ ಸಲ್ಲಿಸುತ್ತಿರುವ ಮುಕ್ತಿಮಂದಿರ ರಸ್ತೆಯಲ್ಲಿರುವ ಪುರಾತನ ಅತ್ತಿಮರದ ಕೆಂಚಮ್ಮದೇವಿ ದೇವಸ್ಥಾನದಲ್ಲಿ ಫೆ.17 ಮತ್ತು 18ರಂದು ಕೆಂಚಮ್ಮದೇವಿ ಮೂರ್ತಿ ಪ್ರತಿಷ್ಠಾಪನೆ ಕಾರ್ಯ ನಡೆಯಲಿದೆ.

ಪಟ್ಟಣದ ಕುಲಕರ್ಣಿ ಕುಟುಂಬದ ಜಮೀನಿನಲ್ಲಿರುವ ಈ ಬಯಲು ದೇವಸ್ಥಾನವನ್ನು ಕುಟುಂಬದವರು ಮತ್ತು ಭಕ್ತರು ಜೀರ್ಣೋದ್ಧಾರಗೊಳಿಸಿದ್ದಾರೆ. ಫೆ.17ರ ಬೆಳಿಗ್ಗೆ 8 ಗಂಟೆಗೆ ಪಟ್ಟಣದ ಶಿಗ್ಲಿನಾಕಾದ ಹನುಮಂತದೇವರ ದೇವಸ್ಥಾನದಿಂದ ಶ್ರೀ ಕೆಂಚಮ್ಮದೇವಿ ಮೂರ್ತಿಯ ಭವ್ಯ ಮೆರವಣಿಗೆಯು ಪ್ರಮುಖ ಮಾರ್ಗದಲ್ಲಿ ಸಾಗಿ ಪ್ರತಿಷ್ಠಾಪನೆ ಸ್ಥಳಕ್ಕೆ ತಲುಪಲಿದೆ. ಮಧ್ಯಾಹ್ನ 2.30ಕ್ಕೆ ಕುಂದಗೋಳದ ಹನುಮಂತಭಟ್ ಜೋಶಿ ಮತ್ತು ಕಳಸದ ನರಸಿಂಹಭಟ್ ಜೋಶಿ ಇವರ ನೇತೃತ್ವದಲ್ಲಿ ಶ್ರೀದೇವಿಯ ಧಾನ್ಯಾಧಿವಾಸ, ಜಲಾಧಿವಾಸ, ಶಯ್ಯಾಧಿವಾಸ, ನವಗ್ರಹ ಸಹಿತ ವಾಸ್ತುಹೋಮ, ಪೂರ್ವಾಂಗ ಪ್ರತಿಷ್ಠಾಪನೆ ಹೋಮ ಇತ್ಯಾದಿಗಳು ಜರುಗಲಿವೆ.

ಫೆ.18ರಂದು ಬೆಳಿಗ್ಗೆ ಬ್ರಾಹ್ಮೀ ಮುಹೂರ್ತದಲ್ಲಿ ದೇವಿಗೆ ಉತ್ತರಾಂಗ ಹೋಮ, ಪ್ರತಿಷ್ಠಾಪನೆ ವಿಧಿ, ಪೂರ್ಣಾಹುತಿ, ಮಹಾಮಂಗಳಾರತಿ ಜರುಗಲಿದೆ. ನಂತರ 11.30ಕ್ಕೆ ಸಭಾ ಕಾರ್ಯಕ್ರಮ, ಭಕ್ತರಿಂದ ಹಣ್ಣುಕಾಯಿ, ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ ಎಂದು ಧಾರ್ಮಿಕ ಕಾರ್ಯಕ್ರಮದ ಧರ್ಮದರ್ಶಿ ರಾಮಚಂದ್ರ ಕುಲಕರ್ಣಿ ಮತ್ತು ಶುಭಾ ಕುಲಕರ್ಣಿ ತಿಳಿಸಿದ್ದಾರೆ.

## ಅಭಿವೃದ್ಧಿ ಪರ ಬಜೆಟ್ ಮಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ



ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಐತಿಹಾಸಿಕ ಹಾಗೂ ರಚನಾತ್ಮಕ ಬಜೆಟ್ ಮಂಡಿಸಿದ್ದು, ರಾಜ್ಯದ ಅಭಿವೃದ್ಧಿಗೆ ಪೂರಕವಾಗಿದೆ. ಎಲ್ಲಾ ವರ್ಗದವರಿಗೆ ಸಲ್ಲುವ ಬಜೆಟ್ ಇದಾಗಿದೆ ಎಂದು ಗದಗ-ಬೆಟಗೇರಿ ಶಹರ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಎಚ್.ಎ. ಶಾರುಖ ಸ್ವಾಗತಿಸಿದ್ದಾರೆ.

ಈ ಬಜೆಟ್‌ನಲ್ಲಿ 2024-25ನೇ ಸಾಲಿನಲ್ಲಿ ಮಹಿಳಾ ಉದ್ದೇಶಿತ ಯೋಜನೆಗಳಿಗೆ 86,423 ಕೋಟಿ ರೂ.ಗಳನ್ನು ಒದಗಿಸಲಾಗಿದೆ. ಮಕ್ಕಳ ಉದ್ದೇಶಿತ ಯೋಜನೆಗಳಿಗೆ ಬಜೆಟ್‌ನಲ್ಲಿ 54,617 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಇಲಾಖೆ ನಿರೀಕ್ಷಿಸಿದಷ್ಟು ಬಜೆಟ್ ದಕ್ಕಿದ್ದು, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆ ಗೃಹಲಕ್ಷ್ಮೀಗೆ ಈ ಸಾಲಿನಲ್ಲಿ 28,608 ಕೋಟಿ ರೂ. ಒದಗಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯರ ಮತ್ತು ಮೇಲ್ವಿಚಾರಕಿಯರ ಬಹುದಿನಗಳ ಬೇಡಿಕೆಯಾಗಿದ್ದ ಸ್ಮಾರ್ಟ್‌ಫೋನ್‌ಗಾಗಿ 90 ಕೋಟಿ ರೂ ಒದಗಿಸಿರುವುದು ಸ್ವಾಗತಾರ್ಹ. ಒಟ್ಟಾರೆ ಇದೊಂದು ಸಮತೋಲಿತ, ಅಭಿವೃದ್ಧಿ ಪರ ಬಜೆಟ್ ಆಗಿದೆ. ಗ್ಯಾರಂಟಿ ಯೋಜನೆಯಿಂದ ರಾಜ್ಯ ದಿವಾಳಿ ಆಗಲಿದೆ ಎಂದು ವಿರೋಧ ಪಕ್ಷಗಳ ಟೀಕೆಗಳಿಗೆ ಸಮತೋಲಿತ ಬಜೆಟ್ ಮಂಡನೆ ಮಾಡಿ ತಕ್ಕ ಉತ್ತರ ನೀಡಿದ ಮುಖ್ಯಮಂತ್ರಿಗಳನ್ನು ಅವರು ಅಭಿನಂದಿಸಿದ್ದಾರೆ.

## ಹಳಿಯಾಳದ ವಿಡಿಆಯ್‌ಟಿ ತಂಡಕ್ಕೆ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಗುರುವಾರ ನಡೆದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿ ವಲಯ ಮಟ್ಟದ ಮಹಿಳೆಯರ ಥ್ರೋಬಾಲ್ ಪಂದ್ಯಾವಳಿಯಲ್ಲಿ ಹಳಿಯಾಳದ ವಿಡಿಆಯ್‌ಟಿ ಕಾಲೇಜು ತಂಡ ಜಯಶಾಲಿಯಾಯಿತು.

ಅಂತಿಮ ಹಣಾಹಣಿಯ ಪಂದ್ಯದಲ್ಲಿ ರಾಣೆಬೆನ್ನೂರು ಎಸ್‌ಟಿಜೆಆಯ್‌ಟಿ ಕಾಲೇಜು ತಂಡವನ್ನು ಸೋಲಿಸಿ ವಿಜೇತ ಟ್ರೋಫಿಯನ್ನು ಎತ್ತಿಹಿಡಿದರು. ರಾಜ್ಯದ ಪ್ರತಿಷ್ಠಿತ ಕಾಲೇಜಿನ 10 ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದವು.

ವಿಜೇತ ತಂಡಕ್ಕೆ ಟ್ರೋಫಿ ವಿತರಿಸಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯ ಡಾ.ಪರಶುರಾಮ ಬಾರಕಿ, ಅಗಡಿ ಇಂಜಿನಿಯರಿಂಗ್ ಕಾಲೇಜು ಶೈಕ್ಷಣಿಕ ಸಾಧನೆಯ ಜತೆಗೆ ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳನ್ನು ಕಾಲೇಜಿನಲ್ಲಿ ಯಶಸ್ವಿಯಾಗಿ ಸಂಘಟಿಸುತ್ತಾ ಬೆಳಗಾವಿ ವಿಭಾಗದಲ್ಲಿ ಉತ್ತಮ ಹೆಸರು ಮಾಡಿದೆ. ಇತ್ತೀಚಿನ ವರ್ಷಗಳಲ್ಲಿ ಕ್ರೀಡಾ ಕ್ಷೇತ್ರಕ್ಕೂ ಸಾಕಷ್ಟು ಮಹತ್ವ ಬಂದಿದೆ. ವಿದ್ಯಾರ್ಥಿಗಳು ತಮ್ಮಲ್ಲಿನ ಪ್ರತಿಭೆಯನ್ನು ಪ್ರದರ್ಶಿಸಬೇಕು. ಆಟದಲ್ಲಿ ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಭಾವನೆ ಎಲ್ಲ ಕ್ರೀಡಾಪಟುಗಳಲ್ಲಿ ಬೆಳೆದು ಬರಬೇಕು ಎಂದರು.

ಕಾರ್ಯಕ್ರಮದಲ್ಲಿ ಪ.ಪೂ ಕಾಲೇಜು ಪ್ರಾಚಾರ್ಯ ಡಾ. ಎನ್.ಹಯವದನ, ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ. ಎಸ್.ಎಫ್. ಕೊಡ್ಲಿ, ಪ್ರೊ. ಗದಿಗೆಪ್ಪ ಯಳ್ಳೂರ, ಪ್ರೊ. ಪ್ರವೀಣ, ಪ್ರೊ. ಎಸ್.ಎಂ. ಪಾಟೀಲ, ಎಂ.ಆಯ್. ಕಣಕೆ, ಷಣ್ಮುಖ ಜಿ., ರಮೇಶ ಕೊಪ್ಪದ, ಯಲ್ಲಪ್ಪ ಜೆ., ರಮೇಶ ರಡ್ಡಿ, ಮುಂತಾದವರಿದ್ದರು. ರಾಣೆಬೆನ್ನೂರು ಎಸ್‌ಟಿಜೆಆಯ್‌ಟಿ ಕಾಲೇಜು ತಂಡ ದ್ವಿತೀಯ ಸ್ಥಾನ, ಲಕ್ಷ್ಮೇಶ್ವರದ ಎಸ್‌ಕೆಎಸ್‌ವಿಎಂಎಸಿಇಟಿ ಕಾಲೇಜು ತಂಡ ತೃತೀಯ ಸ್ಥಾನವನ್ನು ಪಡೆದುಕೊಂಡವು.



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಕೆಸಿಸಿ ಬ್ಯಾಂಕ್ ಮತ್ತು ಪಿಎಸಿಎಸ್ ಇವರ ಸಹಯೋಗದಲ್ಲಿ ಫೈನಾನ್ಶಿಯಲ್ ಲಿಟರ್ಸಿ ಕ್ಯಾಂಪ್ ಅಡಿಯಲ್ಲಿ ಹೊಸ ಬೆಳಕು ಕಾರ್ಯಕ್ರಮ ನಡೆಯಿತು. ಶಾಖಾ ವ್ಯವಸ್ಥಾಪಕಿ ಗಂಗಮ್ಮ ಗದ್ದಿಗೌಡರ ಪ್ರಸ್ತಾವಿಕವಾಗಿ ಮಾತನಾಡಿ, ಬ್ಯಾಂಕ್ ರೈತರ ಜೀವನಾಡಿಯಾಗಿದೆ. ಬ್ಯಾಂಕ್‌ನಿಂದ ರೈತರಿಗಾಗಿ ಶೂನ್ಯ ಬಡ್ಡಿದರದಲ್ಲಿ ಸಾಲ ವಿತರಿಸುತ್ತಿದ್ದು, ಇದರ ಲಾಭ ಪಡೆಯಲು ತಿಳಿಸಿದರು. ಸಭೆಯ ಅಧ್ಯಕ್ಷತೆಯನ್ನು ಚನ್ನವೀರಪ್ಪ ಕಲ್ಯಾಣಿ ವಹಿಸಿದ್ದರು. ಶಿವಣ್ಣ ಅಡರಕಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ನಮ್ಮ ಬೇಡಿಕೆಗಳನ್ನು ಈಡೇರಿಸಿಕೊಳ್ಳೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಫೆ.27ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯ ಸರ್ಕಾರಿ ನೌಕರರ ಮಹಾ ಸಮ್ಮೇಳನದಲ್ಲಿ ಭಾಗವಹಿಸುವ ಸಂಬಂಧ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತಾಲೂಕ ಘಟಕದಿಂದ ಗುರುವಾರ ಪೂರ್ವಭಾವಿ ಸಭೆ ನಡೆಯಿತು.

ಈ ವೇಳೆ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಡಿ.ಎಚ್. ಪಾಟೀಲ ಮಾತನಾಡಿ, ರಾಜ್ಯದ 7ನೇ ವೇತನ ಆಯೋಗದಿಂದ ಶೀಘ್ರ ವರದಿ ಪಡೆದು ರಾಜ್ಯ ಸರ್ಕಾರಿ ನೌಕರರ ವೇತನ ಭತ್ಯೆ, ಓಪಿಎಸ್, ಆರೋಗ್ಯ ಸಂಜೀವಿನಿ ಸೇರಿ ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಫೆ.27ರಂದು ಬೆಂಗಳೂರಿನಲ್ಲಿ ಬೃಹತ್ ಸಮ್ಮೇಳನ ಜರುಗಲಿದೆ. ಈ ಮಹಾ ಸಮ್ಮೇಳನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತಾಲೂಕಿನ ಸರ್ಕಾರಿ, ಅರೆ ಸರ್ಕಾರಿ ಮತ್ತು ನಿವೃತ್ತ ನೌಕರರರು ಭಾಗವಹಿಸಿ, ನಮ್ಮ ಹಕ್ಕು, ನೆಮ್ಮದಿಯ ಬದುಕಿಗಾಗಿ ನಮ್ಮ ಬೇಡಿಕೆಗಳನ್ನು ಈಡೇರಿಸಿಕೊಳ್ಳೋಣ ಎಂದು ಮನವಿ ಮಾಡಿದರು.

ಸಭೆಯಲ್ಲಿ ಪ್ರಧಾನ ಕಾರ್ಯದರ್ಶಿ ಎಮ್.ಎ. ನದಾಫ, ಪ್ರಾ.ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪೂರ, ಪ್ರ.ಕಾರ್ಯದರ್ಶಿ ಚಂದ್ರಕಾಂತ ನೇಕಾರ, ಗೌರವಾಧ್ಯಕ್ಷ ಬಿ.ಎಮ್. ಕುಂಬಾರ, ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಎಫ್.ಎಸ್. ತಳವಾರ, ಗೌರವಾಧ್ಯಕ್ಷ ಎಮ್.ಎಸ್. ಕೊಕ್ಕರಗುಂದಿ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಬಿ.ಎಸ್. ಈಳಗೇರ, ಪದವೀಧರ ನೌಕರರ ಸಂಘದ ಅಧ್ಯಕ್ಷ ಎಮ್.ಡಿ. ವಾರದ, ಕಾರ್ಯದರ್ಶಿ ಬಿ.ಎಮ್. ಯರಗುಪ್ಪಿ, ರಾಜ್ಯ ಪರಿಷತ್ ಸದಸ್ಯರಾದ ಎಮ್.ಎಸ್. ಹಿರೇಮಠ, ಎಸ್.ಬಿ. ಅಣ್ಣಿಗೇರಿ, ಎಮ್.ಎಸ್. ಚಾಕಲಬ್ಬಿ, ಈರಯ್ಯ ಹಿರೇಮಠ, ಎಮ್.ಎಸ್. ಹುಣಸಿಮರದ, ಎನ್.ಎಸ್. ಬಂಕಾಪುರ, ಎಮ್.ಎನ್. ಭರಮಗೌಡ್ರ, ವಿ.ಎಸ್. ಓದುನವರ, ಎಫ್.ಪಿ. ಡಂಬಳ ಸೇರಿದಂತೆ ಇನ್ನಿತರ ಸಂಘಟನೆಗಳ ಪದಾಧಿಕಾರಿಗಳು ಹಾಜರಿದ್ದರು.

## ಬಸವಣ್ಣನ ಸಂದೇಶಗಳ ಪರಿಪಾಲನೆಯಾಗಲಿ

▶▶ ಮೊದಲನೇ ಪುಟದಿಂದ

ಮಹಾತ್ಮಾ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್, ವಿಶ್ವಗುರು ಬಸವಣ್ಣ ಅವರುಗಳ ಭಾವಚಿತ್ರಗಳನ್ನು ಕಚೇರಿಯಲ್ಲಿ ಅಳವಡಿಸಲಾಗುತ್ತಿದೆ. ಅದರಂತೆ ಸಂವಿಧಾನ ಪೀಠಿಕೆಯನ್ನೂ ಸಹ ಅಳವಡಿಸಲಾಗುತ್ತಿದೆ. ಇದರರ್ಥ, ಅಂತಹ ಮಹಾನ್ ಪುರುಷರ ಜೀವನ ಸಂದೇಶ, ಮೌಲ್ಯಗಳನ್ನು ಸರ್ಕಾರಿ ನೌಕರರು ಹಾಗೂ ಜನಸಾಮಾನ್ಯರು ಅರಿತು ಅವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯಲು ಪ್ರೇರಣೆಯಾಗಲಿ ಎಂಬ ಸದುದ್ದೇಶವನ್ನು ಸರ್ಕಾರ ಹೊಂದಿದೆ. ಬಸವಣ್ಣನವರ ಭಾವಚಿತ್ರಗಳನ್ನು ಎಲ್ಲ ಜಿಲ್ಲಾ, ತಾಲೂಕಾ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಹಾಕುವುದರಿಂದ ಪ್ರತಿಯೊಬ್ಬರೂ ತಮ್ಮ ವ್ಯಕ್ತಿತ್ವ ಸರಿಪಡಿಸಲು ಪ್ರೇರಣೆ ನೀಡಿದಂತಾಗುತ್ತದೆ ಎಂದು ಹೇಳಿದರು.

ಬಸವಣ್ಣನವರು ಸಮಾಜದಲ್ಲಿ ಓರೆ-ಕೋರೆಗಳನ್ನು ತಿದ್ದುವ ಕೆಲಸ ಮಾಡಿದ್ದಾರೆ. ಅವರ ಸಂದೇಶಗಳಲ್ಲಿನ ಭಕ್ತಿ-ಭಯಗಳ ಮುಖಾಂತರ ನಾವು ನಮ್ಮ ನಡುವಳಿಕೆ, ನಿಲುವನ್ನು ಸುಧಾರಿಸಿಕೊಳ್ಳಲು ಬದಲಾವಣೆ ತಂದುಕೊಳ್ಳಬೇಕು. ಕಾಯಕವೇ ಕೈಲಾಸ ಎಂದು ಸಾರಿದ ಬಸವಣ್ಣನವರನ್ನು ಹೊಗಳುವುದಕ್ಕಿಂತ ಅವರ ಸಂದೇಶಗಳನ್ನು ನಮ್ಮ ಜೀವನದಲ್ಲಿ ಪರಿಪಾಲಿಸಿ ಅಳವಡಿಸಿಕೊಳ್ಳುವುದು ಬಹಳ ಮುಖ್ಯವಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರನ್ನು ಗೌರವದಿಂದ ಕಾಣಬೇಕು. ಆಡಳಿತದಲ್ಲಿ ಇನ್ನೂ ಹೆಚ್ಚಿನ ಪ್ರಗತಿ ಕಂಡುಕೊಳ್ಳುವ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದು ಸಚಿವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ, ಗಣ್ಯರುಗಳಾದ ಜಿ.ಎಸ್. ಗಡ್ಡದೇವರಮಠ, ಸಿದ್ದು ಪಾಟೀಲ, ಪ್ರೊ. ಕೆ.ಎಚ್. ಬೇಲೂರ, ಎಸ್.ಎನ್. ಬಳ್ಳಾರಿ, ಬಸವರಾಜ ಕಡೆಮನಿ, ಪ್ರಭು ಬುರಬುರೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಂಘ-ಸಂಸ್ಥೆಯವರು ಹಾಜರಿದ್ದರು.

ಬಾಹುಬಲಿ ಜೈನರ ಕಾರ್ಯಕ್ರಮ ನಿರ್ವಹಿಸಿದರು. ಡಾ.ವೆಂಕಟೇಶ ಅಲ್ಕೋಡ ನಾಡಗೀತೆ ಪ್ರಸ್ತುತಪಡಿಸಿದರು.

### ಅಯೋಧ್ಯೆಗೆ ತೆರಳಿದ ವಿ.ಹಿಂ.ಪರಿಷತ್ತಿನ 260 ಶ್ರೀರಾಮಭಕ್ತ ಕಾರ್ಯಕರ್ತರ ಪಡೆ

# ಅಯೋಧ್ಯೆ ಶ್ರೀರಾಮನ ದೈವಿಕ ವಾಸಸ್ಥಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಭಗವಾನ್ ಶ್ರೀರಾಮನ ಜನ್ಮಸ್ಥಳವಾದ ಅಯೋಧ್ಯೆಯು ಹಿಂದೂ ಸಂಪ್ರದಾಯದಲ್ಲಿ ಆಳವಾದ ಪ್ರಾಮುಖ್ಯತೆಯನ್ನು ಹೊಂದಿದೆ ಎಂದು ವಿಶ್ವ ಹಿಂದೂ ಪರಿಷತ್ತಿನ ಮಠ-ಮಂದಿರಗಳ ಪ್ರಾಂತ ಪ್ರಮುಖರಾದ ಬಸವರಾಜ ಹೇಳಿದರು.

ಅವರು ಶನಿವಾರ ಗದುಗಿನ ರೇಲ್ವೇ ನಿಲ್ದಾಣದಲ್ಲಿ ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್ತಿನಿಂದ ಏರ್ಪಡಿಸಿದ್ದ ಅಯೋಧ್ಯೆ ತೆರಳುವ ವಿ.ಹಿಂ.ಪರಿಷತ್ತಿನ 260ಕ್ಕೂ ಹೆಚ್ಚು ಶ್ರೀರಾಮಭಕ್ತ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು.



ಫೆ. 17ರಂದು ಮಧ್ಯಾಹ್ನ 3 ಗಂಟೆಗೆ ಗದಗ ರೇಲ್ವೆ ನಿಲ್ದಾಣದಿಂದ ಹೊರಟ ಈ ವಿಶೇಷ ರೈಲು ಫೆ. 19ರಂದು ರಾತ್ರಿ ಅಯೋಧ್ಯೆ ತಲುಪಲಿದೆ. 2,300 ರೂ. ಪ್ರಯಾಣ ಶುಲ್ಕವಿದ್ದು ಗದಗ ಜಿಲ್ಲೆಯಿಂದ 30, ಬಿಜಾಪೂರ ಜಿಲ್ಲೆಯಿಂದ 111, ಜಮಖಂಡಿಯಿಂದ 42, ಬಾಗಲಕೋಟಿಯಿಂದ 82 ಸೇರಿದಂತೆ ಒಟ್ಟು 265 ಪ್ರಯಾಣಿಕರು ಪ್ರಯಾಣ ಆರಂಭಿಸಿದರು. ಇವರಲ್ಲಿ ಸುಮಾರು 35 ಮಹಿಳಾ ಪ್ರಯಾಣಿಕರಿದ್ದು, ಫೆ. 20ರ ರಾತ್ರಿ ಅಯೋಧ್ಯಾದಿಂದ ಈ ರೇಲ್ವೆ ಮರಳಲಿದೆ.

ಅಯೋಧ್ಯೆಯು ಭಗವಾನ್ ರಾಮನ ದೈವಿಕ ವಾಸಸ್ಥಾನವಾಗಿದೆ. ಇದು ಹಿಂದೂಗಳಿಗೆ ಆಳವಾದ ಭಾವನಾತ್ಮಕ ಮತ್ತು ಆಧ್ಯಾತ್ಮಿಕ ಶೃದ್ಧಾಕೇಂದ್ರವಾಗಿದೆ ಎಂದು ಬಣ್ಣಿಸಿದರಲ್ಲದೆ ವ್ಹಿ.ಎಚ್.ಪಿ ಕಾರ್ಯಕರ್ತರು ಭಗವಾನ್ ಶ್ರೀರಾಮನ ದರ್ಶನ ಪಡೆದು, ಸುಖಕರ ಪ್ರಯಾಣ ಪೂರೈಸಲಿ ಶುಭ ಹಾರೈಸಿದರು.

ರೇಲ್ವೆ ಇಲಾಖೆಯ ಅಧಿಕಾರಿ ಡಾ.ಕವಿರಾಜ ಮಾತನಾಡಿ, ಬೆಳಗಾವಿಯಿಂದ ಹೊರಡುವ ಈ ವಿಶೇಷ ಆಸ್ಥಾ ರೇಲ್ವೆ ಅಯೋಧ್ಯಾ ಧಾಮವನ್ನು ನೇರವಾಗಿ ತಲುಪಲಿದೆ. ಪ್ರಯಾಣಿಕರು ರೇಲ್ವೆಯಲ್ಲಿ ಪ್ರಯಾಣಿಸುವಾಗ ಪರಸ್ಪರ ಸಹಕಾರ, ಸೌಹಾರ್ದತೆಯಿಂದ ವರ್ತಿಸಬೇಕು. ಇಲಾಖೆಯು ಅಗತ್ಯ ಸೌಲಭ್ಯಗಳನ್ನು ಒದಗಿಸಲಿದ್ದು, ಪ್ರಯಾಣಿಕರು ಸ್ವಚ್ಛತೆಯನ್ನು ಕಾಯ್ದುಕೊಳ್ಳಬೇಕೆಂದರು.

ವೇದಿಕೆಯ ಮೇಲೆ ರೇಲ್ವೆ ಇಲಾಖೆಯ ಇನ್ಸೋರ್ವ ಅಧಿಕಾರಿ ದೇವಯಾನಿ, ವ್ಹಿ.ಎಚ್.ಪಿ ಪ್ರಾಂತ ಮಹಿಳಾ ಪ್ರಮುಖರಾದ ಮಾಯಾ ಚೌದರಿ, ಸೇವಾ ಪ್ರಮುಖ ಶಿವು ಮೆಲನಾಡ, ವ್ಹಿ.ಎಚ್.ಪಿ ವಿಜಯಪುರ ಜಿಲ್ಲಾಧ್ಯಕ್ಷ ಸಿದ್ದು ಹೂಗಾರ, ಬಾಗಲಕೋಟಿ ಅಧ್ಯಕ್ಷ ಗಂಗಾಧರ ಮುರನಾಳ, ಗದಗ ಜಿಲ್ಲಾ ಅಧ್ಯಕ್ಷ ಶ್ರೀಧರ ಕುಲಕರ್ಣಿ, ಉಪಾಧ್ಯಕ್ಷ ವೀರಣ್ಣ ಹೇಮಾದ್ರಿ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ ಉಪಸ್ಥಿತರಿದ್ದರು.

ಗಣೇಶ ಲದವಾ, ಪ್ರಶಾಂತ ಚವಡಿ, ಸಚಿನ್ ಮಡಿವಾಳರ, ಮಾರ್ಕಂಡೇಯ ಕಂತ್ರೋಜಿ, ಮಂಜುನಾಥ ದಹಿಂಡೆ ಅವರು ಕಾರ್ಯಕ್ರಮದ ಯಶಸ್ವಿಗೆ ಶ್ರಮಿಸಿದರು. ವಿಶ್ವ ಹಿಂದೂ ಪರಿಷತ್ತು ಪ್ರಯಾಣಿಕರಿಗೆ ವ್ಯವಸ್ಥೆಯನ್ನು ಕಲ್ಪಿಸಿದ್ದು ಪ್ರವೀಣ ಬನ್ನಾಲಿ ಸೇರಿದಂತೆ ಇತರ ದಾನಿಗಳು ಈ ಪ್ರಯಾಣಿಕರಿಗೆ ಉಪಹಾರ, ತಿಂಡಿ-ತಿನಿಸು, ನೀರಿನ ಬಾಟಲ್ ವ್ಯವಸ್ಥೆ ಮಾಡಿದರು ಎಂದು ಗದಗ ಜಿಲ್ಲಾ ವಿ.ಹಿಂ.ಪ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ ತಿಳಿಸಿದ್ದಾರೆ.

## ಡೆಂಗ್ಯೂ ಜ್ವರ ಕುರಿತು ಜನ ಜಾಗೃತಿ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮದಲ್ಲಿ ಜ್ವರದ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಇಲ್ಲಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಮನೆ ಮನೆಗೆ ತೆರಳಿ ಲಾರ್ವಾ ಹಾಗೂ ಜ್ವರ ಹರಡುವ ಕುರಿತು ಜನ ಜಾಗೃತಿ ಮೂಡಿಸಿದರು.

ಗ್ರಾ.ಪಂ ಸಹಭಾಗಿತ್ವದಲ್ಲಿ ಸೊಳ್ಳೆಗಳ ನಿಯಂತ್ರಣಕ್ಕಾಗಿ ಎಲ್ಲ ವಾರ್ಡ್‌ಗಳಲ್ಲಿ ಫಾಗಿಂಗ್ ಮಾಡಲಾಯಿತು. ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಕಾರ್ಯಕರ್ತರು ಸೊಳ್ಳೆಗಳನ್ನು ನಿಯಂತ್ರಿಸುವ ಉದ್ದೇಶದಿಂದ ಮನೆಯ ಸುತ್ತ ಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು, ಪದೇ ಪದೇ ಜ್ವರ ಬರುತ್ತಿದ್ದರೆ ಆರೋಗ್ಯ ಕೇಂದ್ರಕ್ಕೆ ಬಂದು ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ತಿಳುವಳಿಕೆ ನೀಡಿದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ವೈದ್ಯಾಧಿಕಾರಿ ಡಾ. ಅಮೃತ ಹರಿದಾಸ, ಹಿರಿಯ ನಿರೀಕ್ಷಣಾಧಿಕಾರಿ ಮುತ್ತಣ್ಣ ಹಟ್ಟಿಮನಿ, ಸಂರಕ್ಷಣಾಧಿಕಾರಿ ಎಚ್.ಡಿ. ಮಾದರ, ಗಂಗವ್ವ ಕುಂಬಾರ, ಆಶಾ ಕಾರ್ಯಕರ್ತರಾದ ಶಶಿಕಲಾ ರಾಜಮ್ಮ, ಶಂಕ್ರವ್ವ, ಚೈತ್ರಾ, ಸೈನಾಜ ಪಾಲ್ಗೊಂಡಿದ್ದರು.


## ಬಜೆಟ್ ಎಲ್ಲಾ ವರ್ಗದವರ ಅಭಿವೃದ್ಧಿಗೆ ಪೂರಕ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ



ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್ ಎಲ್ಲಾ ವರ್ಗದ ಜನರ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಶಾಸಕಿ ಎಂ.ಪಿ.ಲತಾ ಹೇಳಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಗ್ಯಾರಂಟಿ ಯೋಜನೆಗಳ ಮೂಲಕ ಪ್ರತಿ ಕುಟುಂಬಕ್ಕೆ 50000 ದಿಂದ 550000 ಒದಗಿಸಿಲಾಗಿದ್ದು, ರೈತರ ಆದಾಯ ಹೆಚ್ಚಿಸಲು ಬೆಳೆಗಳಿಗೆ ಸಮರ್ಪಕ ಬೆಲೆ ಒದಗಿಸುವ ಸಲುವಾಗಿ ಅಹಾರ ಸಂಸ್ಕರಣಾ ಆಯುಕ್ತಾಲಯ ರಚಿಸಲಾಗಿದೆ. ರೈತರಿಗೆ ಅಲ್ಪಾವಧಿ ಸಾಲದ ಮೊತ್ತವನ್ನು 3 ರಿಂದ 5 ಲಕ್ಷದ ವರೆಗೆ ಹೆಚ್ಚಿಸಿದ್ದು, ರೈತ ಮಹಿಳೆಯರಿಗೆ ಹೈನುಗಾರಿಕೆಗೆ ಪ್ರೋತ್ಸಾಹಿಸಲು ಸರ್ಕಾರದಿಂದ ಶೇಕಡಾ 6% ಬಡ್ಡಿ ಸಹಾಯಧನ ಒದಗಿಸುವದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಹಾಪ್ ಕಾಮ್ಸ್‌ನ ಕಾರ್ಯಾಲಯದಲ್ಲಿ ಹಾಪ್ ಕಾಮ್ಸ್‌ನ ಜಿಲ್ಲಾಧ್ಯಕ್ಷ ಬಸವರಾಜ ಕೊರ್ಲಹಳ್ಳಿ ಶನಿವಾರ ವಿಶ್ವಗುರು ಶ್ರೀ ಜಗಜ್ಯೋತಿ ಬಸವಣ್ಣನವರ ಭಾವಚಿತ್ರವನ್ನು ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಗಿರೀಶ್, ಹಾಪ್‌ಕಾಮ್ಸ್ ನಿರ್ದೇಶಕರಾದ ಸುಶೀಲಮ್ಮ ಕೋಟಿ, ರಾಜಗೋಪಾಲ ಕಡ್ಲಿಕೊಪ್ಪ, ಬಸವರಾಜ ಬ್ಯಾಹಟ್ಟಿ, ನಿವೇದಿತಾ ಪಾಟೀಲ ಹಾಗೂ ಸಿಬ್ಬಂದಿ ವರ್ಗದವರಿದ್ದರು.

## ರೈತ ಕಾರ್ಮಿಕರ ಬೇಡಿಕೆಗಳ ಈಡೇರಿಕೆಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಎನ್.ಡಿ.ಎ. ನೇತೃತ್ವದ ಕೇಂದ್ರ ಸರ್ಕಾರ ಸಂಪೂರ್ಣವಾಗಿ ತನ್ನ ನೀತಿಗಳನ್ನು ಬದಲಾಯಿಸಬೇಕೆಂದು ಒತ್ತಾಯಿಸಿ ದೇಶದ ಎಲ್ಲಾ ರೈತರು, ಕೂಲಿಕಾರ್ಮಿಕರು ಒಂದಾಗಿ ದೇಶಾದ್ಯಂತ ಪ್ರತಿಭಟನೆ ನಡೆಸುತ್ತಿದ್ದಾರೆ. ದೆಹಲಿ ಗಡಿಯಲ್ಲಿ ಹೋರಾಟ ನಿರತ ರೈತರ ಮೇಲೆ ಪೊಲೀಸ್ ದಬ್ಬಾಳಿಕೆ ಮಾಡಿರುವುದನ್ನು ಖಂಡಿಸಿ ಮತ್ತು ರೈತರ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿ ಸಿಐಟಿಯು ವತಿಯಿಂದ ಪ್ರಧಾನ ಮಂತ್ರಿಗಳಿಗೆ ಗದಗ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿದರು.

ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ನಿಯಂತ್ರಿಸಬೇಕು, ಕೃಷಿ ಕಾರ್ಮಿಕರಿಗೆ ಸಮಗ್ರವಾದ ಕಲ್ಯಾಣ ಯೋಜನೆಗಳನ್ನು ರೂಪಿಸುವುದು, ರೈಲ್ವೆ, ವಿದ್ಯುತ್ ಸೇರಿದಂತೆ ಸಾರ್ವಜನಿಕ ಕ್ಷೇತ್ರಗಳ ಖಾಸಗೀಕರಣ ಕೈಬಿಡುವುದು, ಡಾ. ಸ್ವಾಮಿನಾಥನ್ ಕನಿಷ್ಠ ಬೆಂಬಲ ಬೆಲೆಗೆ ಕಾನೂನು ರಚಿಸುವುದು, ನರೇಗಾ ಯೋಜನೆಯನ್ನು 200 ದಿನಗಳಿಗೆ ಹೆಚ್ಚಿಸಿ 600 ರೂ. ಕೂಲಿ ನಿಗದಿ, ಬಯೋಮೆಟ್ರಿಕ್ ಪದ್ಧತಿ ತೆಗೆಯುವುದು, 49 ವರ್ಷಗಳಿಂದ ದುಡಿಯುತ್ತಿರುವ ಅಂಗನವಾಡಿ ನೌಕರರು, 20 ವರ್ಷಗಳಿಂದ ದುಡಿಯುತ್ತಿರುವ ಬಿಸಿಯೂಟ ನೌಕರರು, ಆಶಾ ಮತ್ತು ಇತರೆ ಸಿಬ್ಬಂದಿಗಳಿಗೆ 31 ಸಾವಿರ ರೂ. ಕನಿಷ್ಠ ವೇತನ, ನಿವೃತ್ತಿ ವೇತನ ನೀಡುವುದು, ಎಲ್ಲಾ ಅಸಂಘಟಿತ ಕಾರ್ಮಿಕರ ಸಮಗ್ರ ಸಾಮಾಜಿಕ ಭದ್ರತೆಗೆ ಜಿಡಿಪಿ ಶೇ. 6%ನ್ನು ಮೀಸಲಿರಿಸುವುದು ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹೇಶ ಹಿರೇಮಠ, ಮಾರುತಿ ಚಿಟಗಿ, ಯಶೋಧಾ ಬೆಟಗೇರಿ, ಬಸವರಾಜ ಮಂತೂರ, ರುದ್ರಪ್ಪ ಕಂದಗಲ್ಲ, ಸಾವಿತ್ರಿ ಸಬ್ನಿಸ್, ಶಾರದಾ ರೋಣದ, ಪೀರು ರಾಠೋಡ, ಮುತ್ತಪ್ಪ ಚಲವಾದಿ, ಮೈಬೂ ಹವಾಲ್ದಾರ, ನಿಂಗಪ್ಪ ಸರಸೂರೆ, ಸಂತೋಷ ಕುಂಬಾರ, ಬಸವರಾಜ ಮೇವುಂಡಿ, ಸುವರ್ಣ ಇಂಡಿ, ಸಂಕಪ್ಪ ಕುರಹಟ್ಟಿ, ಎಂ.ಎಸ್. ಹಡಪದ ಮುಂತಾದವರು ಹಾಜರಿದ್ದರು.

## ಗದಗ ಶೂಟರ್‌ಗಳ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿಗೆ ಕರ್ನಾಟಕ ಸ್ಟೇಟ್ ರೈಫಲ್ ಅಸೋಸಿಯೇಶನ್ ಆಯೋಜಿಸಿದ್ದ ನಾಗರಾಜರಾವ್ ಜಗದಲೆ ಸ್ಟೇಟ್ ಶೂಟಿಂಗ್ ಕಾಂಪಿಟೇಶನ್ 2024ರಲ್ಲಿ ಗದಗ ಸ್ಪೋರ್ಟ್ಸ್ ಶೂಟಿಂಗ್ ಅಕಾಡಟ್ಸ್ಯ ವಿದ್ಯಾರ್ಥಿಗಳು ಭಾಗವಹಿಸಿ ಪದಕ ಪಡೆದು ಸಾಧನೆಗೈದಿದ್ದಾರೆ.

10 ಮೀಟರ್ ಏರ್ ಪಿಸ್ತೂಲ್ ವೈಯಕ್ತಿಕ ವಿಭಾಗದಲ್ಲಿ ಸಿದ್ಧಾರ್ಥ ಎಂ.ಬಡ್ನಿ ಕಂಚಿನ ಪದಕ, ಸಬ್‌ಯುಥ್ ವಿಭಾಗದಲ್ಲಿ ರಿಯಾನ್ ಎಂ.ಹಮ್ಮೀದ, ಸಿದ್ಧಾರ್ಥ ಬಡ್ನಿ, ವಾಹೀದ್ ಗೋನಾಳ ಕಂಚಿನ ಪದಕ ಪಡೆದಿದ್ದಾರೆ.

ತರಬೇತುದಾರ ಬಸವರಾಜ ಹೊಂಬಾಳಿ ಸೀನಿಯರ್ ವಿಭಾಗದಲ್ಲಿ ಬೆಳ್ಳಿ ಪದಕವನ್ನು ಪಡೆದಿದ್ದು, ಸುಶಾಂತ ಉಗಲಾಟ, ಐಮನ್ ಕೊಪ್ಪಳ ಇವರು ಸೌಥ್ ಜೋನಲ್‌ಗೆ ಆಯ್ಕೆಯಾಗಿದ್ದಾರೆ.

ಈ ಎಲ್ಲಾ ವಿದ್ಯಾರ್ಥಿಗಳಿಗೆ ಅಕಾಡೆಮಿಗೆ ಅಧ್ಯಕ್ಷ ಮುರುಘರಾಜೇಂದ್ರ ಎಂ.ಬಡ್ನಿ ಹಾಗೂ ಪಾಲಕರಾದ ಮುನೀರಅಹ್ಮದ, ಗಣೇಶ ಕಬಾಡಿ, ಡಾ. ಪ್ರದೀಪ ಉಗಲಾಟ, ರುಕ್ಸನಾ ಗೋನಾಳ ಹಾಗೂ ಎಲ್ಲಾ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## ನಿಧನ ವಾರ್ತೆ

**ಮೌಲಾಸಾಬ ಇ. ಬೆನಕಲ್ಲ**



ಡಂಬಳ, ಗ್ರಾಮದ ಜಗದ್ಗುರು ತೋಂಟದಾರ್ಯ ಪ್ರೌಢಶಾಲೆಯ ನಿವೃತ್ತ ಸಿಬ್ಬಂದಿ, ಮುಸ್ಲಿಂ ಸಮಾಜದ ಹಿರಿಯರಾದ ಮೌಲಾಸಾಬ ಇ.ಬೆನಕಲ್ಲ (83) ಶುಕ್ರವಾರ ನಿಧನರಾದರು.

ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವಿದೆ. ಗ್ರಾಮದ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು, ಸಂಸ್ಥೆಯ ಗುರುವೃಂದ, ವಿದ್ಯಾರ್ಥಿ ಬಳಗದವರು ಸಂತಾಪ ಸೂಚಿಸಿದ್ದಾರೆ.

### ವಿಜ್ಞಾನ ವಿಷಯದ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಮಹಾದೇವಿ ಮಾಡಲಗೇರಿ

# ವೈಜ್ಞಾನಿಕ ಮನೋಭಾವನೆಯಿಂದ ಅಲೋಚಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜ್ಞಾನ ವಿಷಯದ ಬಗ್ಗೆ ವಿದ್ಯಾರ್ಥಿಗಳಿಗೆ ಕುತೂಹಲ ಹಾಗೂ ಆಸಕ್ತಿ ಹೆಚ್ಚಾಗಿರುತ್ತದೆ. ವಿಜ್ಞಾನ ಎನ್ನುವದು ಒಂದು ವಿಸ್ಮಯಕಾರಿ, ಸತ್ಯಕ್ಕೆ ಸಮೀಪವಿರುವ ವಿಷಯವಾಗಿದೆ. ಕಾರಣ ಎಲ್ಲ ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವನೆಯಿಂದ ಅಲೋಚಿಸಬೇಕು ಎಂದು ಉಪನಿರ್ದೇಶಕರ ಕಾರ್ಯಾಲಯದ ಶಿಕ್ಷಣಾಧಿಕಾರಿ ಮಹಾದೇವಿ ಮಾಡಲಗೇರಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಫೆ. 16ರಂದು ನಡೆದ ಐದನೇ ದಿನದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ವಿಜ್ಞಾನ ವಿಷಯದ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಭಾಗವಹಿಸಿದ ವಿದ್ಯಾರ್ಥಿಗಳೊಂದಿಗೆ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಹೆಚ್ಚಾಗಿ ರಾಸಾಯನಿಕ ಸಮೀಕರಣಗಳು, ಜೀವ ವಿಕಾಸ, ವಿಜ್ಞಾನ ಚಿತ್ರಗಳ ಬಗ್ಗೆ, ಸರಳ ತಿಳುವಳಿಕೆಯ ಮಾರ್ಗಗಳು, ವಿಜ್ಞಾನ ಸೂತ್ರಗಳನ್ನು ಹೇಗೆ ನೆನಪಿಟ್ಟುಕೊಳ್ಳುವದು, ನೂರಕ್ಕೆ ನೂರು ಅಂಕಗಳನ್ನು ಗಳಿಸುವ ಕೌಶಲ್ಯ ಮುಂತಾದವುಗಳ ಬಗ್ಗೆ ಪ್ರಶ್ನೆಗಳನ್ನು ಕೇಳಿ ಪರಿಹಾರ ಪಡೆದುಕೊಂಡರು.



ಅಕ್ಷರ ದಾಸೋಹದ ಶಿಕ್ಷಣಾಧಿಕಾರಿ ಎಸ್.ಡಿ. ಕನವಳ್ಳಿ ಮಾತನಾಡುತ್ತಾ, ವಿಜ್ಞಾನ ವಿಷಯದ ಶಿಕ್ಷಕರು ಹೆಚ್ಚಾಗಿ ಪ್ರಾಯೋಗಿಕವಾಗಿ, ಅಗತ್ಯ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳ ಮನಮುಟ್ಟುವಂತೆ ತಮ್ಮ ಬೋಧನಾ ವಿಧಾನ ಬೆಳೆಸಿಕೊಳ್ಳಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಭಾಗವಹಿಸಿದ ವಿಜ್ಞಾನ ವಿಷಯದ ಸಂಪನ್ಮೂಲ ವ್ಯಕ್ತಿಗಳು ಮಕ್ಕಳಿಗೆ ಪರೀಕ್ಷೆ ಮುಗಿಯುವರೆಗೆ ಸತತ ಬೆಂಬಲದ ಭರವಸೆ ನೀಡಿದರು. ಕೇವಲ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಮಾತ್ರವಲ್ಲ ಪರೀಕ್ಷೆ ಪ್ರಾರಂಭವಾಗುವ ಹಿಂದಿನ ದಿನದವರೆಗೂ ಮಕ್ಕಳು ತಾವು ಓದುವಾಗ, ಬರೆಯುವಾಗ ಏನಾದರೂ ಗೊಂದಲಗಳು, ಸಂದೇಹಗಳು ಹಾಗೂ ಸಮಸ್ಯೆಗಳು ಕಂಡು ಬಂದಲ್ಲಿ ಪ್ರತಿದಿನ ಸಾಯಂಕಾಲ 5.30ರಿಂದ 6.30ರ ಒಳಗೆ ಈಗಾಗಲೇ ನೀಡಿದ ಸಂಪನ್ಮೂಲ ಶಿಕ್ಷಕರಿಗೆ ದೂರವಾಣಿ ಮೂಲಕ ಸಂಪರ್ಕ ಮಾಡಿ ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಎಂದು ತಿಳಿಸಿದರು.


ಕಾರ್ಯಕ್ರಮದಲ್ಲಿ ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ, ಡಯಟ್ ಉಪನ್ಯಾಸಕರದಾ ಶಂಕರ ಹಡಗಲಿ, ಕ್ಷೇತ್ರ ಸಮನ್ವಯಾಧಿಕಾರಿ ಹೆಚ್.ಎ. ಫಾರೂಕಿ, ಶಿಕ್ಷಣ ಸಂಯೋಜಕರಾದ ಶ್ಯಾಮ ಲಾಂಡೆ, ಐ.ಬಿ. ಮಡಿವಾಳರ, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಪಿ.ಡಿ. ಮಂಗಳೂರ, ಸಂಪನ್ಮೂಲ ಶಿಕ್ಷಕರಾದ ಕೆ.ವ್ಹಿ. ಕೋರಡ್ಡಿ, ಐ.ಎಸ್. ಗೌಡರ, ಎಸ್.ಎಸ್. ಗಂಜಿ, ಎಮ್.ಡಿ. ವಡವಿ, ಫ್ರಾನ್ಸಿಸ್ ಜೋನ್ಸ್, ಎಮ್.ಎಮ್. ಮಕಾನದಾರ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ತೋಂಟದಾರ್ಯ ಪ್ರೌಢಶಾಲೆಯ ಶಿಕ್ಷಕರಾದ ಕೆ.ಎಮ್. ಗೌಡರ ಹಾಗೂ ತೋಂಟದಾರ್ಯ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳಾದ ನಾಗರಾಜ ಗಾಳಿ ಉಪಸ್ಥಿತರಿದ್ದರು.

ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿಯವರು ಮಾತನಾಡಿ, ವಿದ್ಯಾರ್ಥಿಗಳು ವರ್ಷದ ಪ್ರಾರಂಭದಿಂದ ವರ್ಗದ ಕೊಠಡಿಗಳಲ್ಲಿ ಮಾಡಿದ ಪ್ರಯೋಗಗಳು, ವಿಜ್ಞಾನ ವಿಷಯದಲ್ಲಿ ಬರುವ ಚಿತ್ರಗಳನ್ನು ಯಾವುದೇ ತಪ್ಪಿಲ್ಲದಂತೆ ನೆನಪಿನಲ್ಲಿಟ್ಟುಕೊಂಡು ಪರೀಕ್ಷೆಯಲ್ಲಿ ಕೇಳಿದ ಪ್ರಶ್ನೆಗೆ ವಿವರವಾದ, ಆಕರ್ಷಕವಾದ ಬರವಣಿಗೆಯ ಮೂಲಕ ಉತ್ತರಿಸುವಂತೆ ಮಾರ್ಗದರ್ಶನ ಮಾಡಿದರು. ಶಿಕ್ಷಕರು ಕೂಡಾ ಇದೇ ಹಿನ್ನೆಲೆಯಲ್ಲಿ ಮಾರ್ಗದರ್ಶನ ಮಾಡುವಂತೆ ಅವರು ಕರೆ ನೀಡಿದರು.



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಕ್ಷೇತ್ರ ಚಿಕ್ಕೆನಕೊಪ್ಪದ ಚನ್ನವೀರ ಶರಣರ 29ನೇ ಜಾತ್ರಾ ಮಹೋತ್ಸವದ ಅಂಗವಾಗಿ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ವಕ್ತಾರ ವಿರೂಪಾಕ್ಷ ವಿ.ಹಿತ್ತಲಮನಿ, ತೌಸಿಫ ಢಾಲಾಯತ, ಕುಮಾರ್ ರ‍್ಯಾವಣ್ಣವರ, ಮೌಲಾಸಾಬ ಸಂದಿಮನಿ ಮತ್ತು ಮಹಿಳಾ ಕಾರ್ಯಕರ್ತರು ಪ್ರಸಾದ ಸೇವೆಯಲ್ಲಿ ಪಾಲ್ಗೊಂಡಿದ್ದರು.



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯಲ್ಲಿ ಶುಕ್ರವಾರ ಸವಿತಾ ಮಹರ್ಷಿ ಜಯಂತಿಯನ್ನು ಆಚರಿಸಲಾಯಿತು. ಎ.ಎನ್. ಪುಣೇಕರ, ಮಹಮ್ಮದ್ ಮೊಹಸಿನ ಮುಜಾವರ, ಕೆ.ಟಿ. ಯಾದವಾಡ, ಎಸ್.ಎನ್. ದಳವಾಯಿ, ರಾಜು ಕಾಕನೂರ, ಎಸ್.ಎಂ. ಮಕಾನದಾರ ಮತ್ತಿತರರು ಹಾಜರಿದ್ದರು.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024–25ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25% ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು.

ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ https://sevasindhu.karnataka.gov.in (ಸೇವಾ ಸಿಂಧು) ಮೂಲಕ ಮಾರ್ಚ್ 15ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಾದ 08371–262911 ತಾಲೂಕ ಪಂಚಾಯತಿ ಆವರಣ, ಮುಂಡರಗಿ; 08372–297494 ಮೌಲಾನಾ ಆಝಾದ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ; 08381–267258 ತಾಲೂಕ ಪಂಚಾಯತ್ ಆವರಣ, ರೋಣ ; 08377–245411 ತಹಸೀಲ್ದಾರ ಕಾರ್ಯಾಲಯ ರೂ.ನಂ:20, ನರಗುಂದ– 08487–242810 ತಾಲೂಕ ಪಂಚಾಯತ ಹತ್ತಿರ, ಶಿರಹಟ್ಟಿ ಇಲ್ಲಿ ಸಂಪರ್ಕಿಸಬಹುದಾಗಿದೆ.

# ಖ್ಯಾತ ಉರ್ದು ಕವಿ ಗುಲ್ಜಾರ್, ಸಂಸ್ಕೃತ ವಿದ್ವಾಂಸ ರಾಮಭದ್ರಾಚಾರ್ಯಗೆ ಜ್ಞಾನಪೀಠ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಖ್ಯಾತ ಉರ್ದು ಕವಿ ಗುಲ್ಜಾರ್ ಮತ್ತು ಸಂಸ್ಕೃತ ವಿದ್ವಾಂಸ ಜಗದ್ಗುರು ರಾಮಭದ್ರಾಚಾರ್ಯ ಅವರು 58ನೇ ಜ್ಞಾನಪೀಠ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ಜ್ಞಾನಪೀಠ ಆಯ್ಕೆ ಸಮಿತಿ ಶನಿವಾರ ಪ್ರಕಟಿಸಿದೆ.

## ಚಿಕೇನಕೊಪ್ಪದ ಚನ್ನವೀರಶರಣರ 29ನೇ ಪುಣ್ಯಸ್ಮರಣೋತ್ಸವ | ಧರ್ಮಚಿಂತನ ಗೋಷ್ಠಿ

# ಸೃಷ್ಟಿಯನ್ನು ಕಲುಷಿತಗೊಳಿಸದಿರುವುದೇ ಧರ್ಮ

■ ವಿಜಯಸಾಕ್ಷಿ ಸುದ್ದಿ, ಗದಗ

ಧರ್ಮವು ಮನುಷ್ಯನು ಭೂಮಿಯ ಮೇಲೆ ಹೇಗೆ ಬದುಕಬೇಕೆಂಬುದನ್ನು ಕಲಿಸುತ್ತದೆ. ಜೀವ ಜಗತ್ತನ್ನು ಸೂಕ್ಷ್ಮವಾಗಿ ಅವಲೋಕಿಸಿದಾಗ ನಿಸರ್ಗಧರ್ಮ, ಪ್ರಾಣಿಧರ್ಮ, ಮನುಷ್ಯ ಧರ್ಮ, ವೈದ್ಯ ಧರ್ಮ, ಮೊದಲಾದವು ಕಾಣಸಿಗುತ್ತವೆ. ಮನುಷ್ಯನ ಬದುಕಿನಿಂದ ಪ್ರಪಂಚ ಕೆಡಬಾರದು. ಮನುಷ್ಯ ಸಂತೋಷವಾಗಿರುವದನ್ನು ಬಿಟ್ಟಿರಬಾರದು ಎಂಬುದೂ ಸಹ ಧರ್ಮದ ಸಾರವಾಗಿದೆ. ಮನುಷ್ಯ ಧರ್ಮ ಕಾರ್ಯಗಳನ್ನು, ಪುಣ್ಯ ಕಾರ್ಯಗಳನ್ನು ಮಾಡಿ ಧರ್ಮವಂತನಾಗಿ ನಡೆಯುವುದು ಹಾಗೂ ದುಡಿಮೆಯೇ ನಿಜವಾದ ಧರ್ಮ, ಮನಸ್ಸು ಮತ್ತು ಸೃಷ್ಟಿಯನ್ನು ಕೆಡದಂತೆ ನೋಡಿಕೊಳ್ಳುವುದು ಧರ್ಮವಾಗಿದೆ ಎಂದು ಕೊಪ್ಪಳ ಗವಿಮಠದ ಜಗದ್ಗುರು ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ನುಡಿದರು.

ತಾಲೂಕಿನ ಚಿಕೇನಕೊಪ್ಪದ ಸುಕ್ಷೇತ್ರ ಬಳಗಾನೂರಿನ ಚನ್ನವೀರಶರಣರ ಮಠದಲ್ಲಿ ಚನ್ನವೀರಶರಣರ 29ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಧರ್ಮಚಿಂತನಗೋಷ್ಠಿಯಲ್ಲಿ ಶ್ರೀಗಳು ಮಾತನಾಡಿದರು.

ಹುಟ್ಟು–ಸಾವುಗಳ ನಡುವೆ ಬದುಕು ಕ್ಷಣಿಕವಾಗಿದೆ. ಮನುಷ್ಯ ಯಶಸ್ವಿಯಾಗುವುದು ಹುದ್ದೆ, ದುಡ್ಡು,



ಸಂಪತ್ತಿನಂದಲ್ಲ. ತನ್ನ ಕಾರ್ಯಗಳಿಂದ, ಮಾತುಗಳಿಂದ. ಇನ್ನೊಬ್ಬರ ಬದುಕಿನಲ್ಲಿ ಸಂತೋಷವನ್ನು ತಂದುಕೊಡುವವನು ಯಶಸ್ವಿಯಾಗುತ್ತಾನೆ. ಚಿಕೇನಕೊಪ್ಪದ ಚನ್ನವೀರ ಶರಣರು ಸರ್ವರೂ ಸುಖವಾಗಿರಲಿ ಎಂಬ ಸಂಕಲ್ಪ ಮಾಡಿ ಸರ್ವರ ಒಳಿತು ಬಯಸಿದವರು. ಶರಣರು ಬಳಸಿದ ಭಾಷೆ ಮೌನ, ಅದು ದೇವಭಾಷೆ. ಮೌನದಿಂದ ಎಲ್ಲರ ಹೃದಯದಲ್ಲಿದ್ದಾರೆ. ಗುರು ಮೆಚ್ಚಿದ ಶ್ರೇಷ್ಠ ಶಿಷ್ಯ ಚನ್ನವೀರಶರಣರು. ಗುರುಭಕ್ತಿ ದೇವರನ್ನಾಗಿಸುವುದು ಎಂಬುದಕ್ಕೆ ಶರಣರೇ ಸಾಕ್ಷಿ ಎಂದು ಆಶೀರ್ವಚನ ನೀಡಿದರು.


> ವಿದೇಶಗಳಲ್ಲಿ ಭೌತಿಕ ಸಂಪತ್ತು ಹಾಗೂ ಸೌಕರ್ಯಗಳು ಹೇರಳವಾಗಿ ದೊರೆಯಬಹುದು. ಆದರೆ ಆಧ್ಯಾತ್ಮಿಕವಾಗಿ ನಮ್ಮ ದೇಶ ಮುಂಚೂಣಿಯಲ್ಲಿದೆ. ಆಧ್ಯಾತ್ಮಿಕ ಶಕ್ತಿ ಮನುಷ್ಯನಲ್ಲಿ ಚೈತನ್ಯವನ್ನುಂಟು ಮಾಡುತ್ತದೆ. ಸಾರ್ವಕಲಿಕ ಸತ್ಯವನ್ನು ಆಧ್ಯಾತ್ಮದಲ್ಲಿ ಕಾಣಬಹುದು. ಆಧ್ಯಾತ್ಮಿಕ ಅನುಸಂಧಾನ ಮನುಷ್ಯನಲ್ಲಿ ಅಂತರ್ಗತ ಶಕ್ತಿ ಹೆಚ್ಚಿಸುತ್ತದೆ ಎಂದು ಡಾ. ಮಹಾಂತಪ್ರಭು ಮಹಾಸ್ವಾಮಿಗಳು ನುಡಿದರು.

ಶೇಗುಣಿಸಿ ವಿರಕ್ತಮಠದ ಡಾ. ಮಹಾಂತಪ್ರಭು ಮಹಾಸ್ವಾಮಿಗಳು ಉಪದೇಶಾಮೃತ ನೀಡಿ, ಜಾತಿ, ಮತ, ಪಂಥ, ವರ್ಗ, ವರ್ಣ, ಮೇಲು–ಕೀಳು, ನೀಚ, ಉಚ್ಚ ಎನ್ನದೆ ಮಠಗಳು ಸಮಾಜಮುಖಿ ಕಾರ್ಯಗಳ ಮೂಲಕ ಜನಕಲ್ಯಾಣ ಮಾಡುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಹೊಸಳ್ಳಿಯ ಶ್ರೀ ಬೂದೀಶ್ವರ ಮಹಾಸ್ವಾಮಿಗಳು ಮಾತನಾಡಿ, ಮನುಷ್ಯ ಲೌಕಿಕ ಮತ್ತು ಪಾರಮಾರ್ಥಿಕ ಎರಡರಲ್ಲೂ ಜೀವನ ನಿರ್ವಹಿಸಿ ಜೀವನದ ಸಾರ್ಥಕತೆ ಪಡೆಯಬೇಕೆಂದರು. ಶ್ರೀ ಶಿವಶಾಂತವೀರ ಶರಣರು ನೇತೃತ್ವ ವಹಿಸಿದ್ದರು. ಹೆಬ್ಬಾಳ ಬೃಹನ್ಮಠದ ಷ.ಬ್ರ. ನಾಗಭೂಷಣ ಶಿವಾಚಾರ್ಯ ಮಹಾಸ್ವಾಮಿಗಳು, ಮಂಗಳೂರಿನ ಷ.ಬ್ರ. ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಅಣದೂರಿನ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು, ಹಿರೇವಡ್ಡಟ್ಟಿಯ ಷ.ಬ್ರ. ವೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಶಿರೋಳದ ಯಚ್ಚರೇಶ್ವರ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಖಜ್ಜಿಡೋಣಿಯ ಕೃಷ್ಣಾನಂದ ಶಾಸ್ತ್ರಿಗಳು ಆಧ್ಯಾತ್ಮಿಕ ಅನುಭಾವದ ನುಡಿಗಳನ್ನಾಡಿದರು. ದಿಯಾಪೀರಸಾಬ ಕೌತಾಳ ವಚನ ಸಂಗೀತ ನೀಡಿದಳು. ಬೆಂಗಳೂರಿನ ಮಹೇಶಕುಮಾರ ಹೇರೂರ ತಂಡದವರು ನೀಡಿದ ಸಂಗೀತ ಕಚೇರಿ ಎಲ್ಲರ ಮನಸೂರೆಗೊಂಡಿತು. ಮಾಜಿ ಸಚಿವ ಬಿ.ಆರ್. ಯಾವಗಲ್ಲ, ಧಾರವಾಡ ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಮೊದಲಾದವರು ಉಪಸ್ಥಿತರಿದ್ದರು. ಬಿ.ವಾಯ್. ಡೊಳ್ಳಿನ ಸ್ವಾಗತಿಸಿದರು. ಶಿವಲಿಂಗಶಾಸ್ತ್ರಿ ಸಿದ್ದಾಪೂರ ಕಾರ್ಯಕ್ರಮ ನಿರೂಪಿಸಿದರು. ಶಿವಶರಣಗೌಡ ಯರಡೋಣಿ ವಂದಿಸಿದರು.

# ಬಸವೇಶ್ವರರ ಭಾವಚಿತ್ರ ಅನಾವರಣ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ಸರಕಾರ ವಿಶ್ವಗುರು ಬಸವಣ್ಣನವರನ್ನು 'ಕರ್ನಾಟಕ ಸಾಂಸ್ಕೃತಿಕ ನಾಯಕ' ಎಂದು ಘೋಷಿಸಿದ ಹಿನ್ನೆಲೆಯಲ್ಲಿ ಶನಿವಾರ ಲಕ್ಷ್ಮೇಶ್ವರದ ತಹಸೀಲ್ದಾರ ಕಚೇರಿಯಲ್ಲಿ ಬಸವೇಶ್ವರರ ಭಾವಚಿತ್ರ ಅನಾವರಣಗೊಳಿಸಿ ಪೂಜೆ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಗ್ರೇಡ್–2 ತಹಸೀಲ್ದಾರ ಮಂಜುನಾಥ ಅಮಾಸಿ, 12ನೇ ಶತಮಾನದಲ್ಲಿ ಸಮ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸಿ, ಕಾಯಕ ಸಿದ್ಧಾಂತ ಪ್ರತಿಪಾದಿಸಿದ ಜಗಜ್ಯೋತಿ ಬಸವೇಶ್ವರರು ಇಡೀ ದೇಶದ ಹೆಮ್ಮೆಯ ಸಂಕೇತವಾಗಿದ್ದಾರೆ. ಕರ್ನಾಟಕ ಸರ್ಕಾರದ ಆದೇಶದಂತೆ ಕರ್ನಾಟಕ ಸಾಂಸ್ಕೃತಿಕ ನಾಯಕ ಎಂಬ ಘೋಷಣೆಯೊಂದಿಗೆ ಅವರ ಭಾವಚಿತ್ರವನ್ನು ತಾಲೂಕಾಡಳಿತದಲ್ಲಿ ಅನಾವರಣ ಮಾಡಲಾಗುತ್ತಿದೆ ಎಂದು ಹೇಳಿದರು.

ಬಿಆರ್‌ಪಿ ಹಾಗೂ ಕಸಾಪ ತಾಲೂಕ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ಇಡೀ ವಿಶ್ವಕ್ಕೆ ಪ್ರಜಾಪ್ರಭುತ್ವದ ಸ್ಪಷ್ಟ ಕಲ್ಪನೆ ನೀಡಿದವರು ಬಸವೇಶ್ವರರು. ಅನುಭವ ಮಂಟಪದ ಮೂಲಕ ವಿಶ್ವದ ಮೊದಲ ಸಂಸತ್ತನ್ನು ಜಗತ್ತಿಗೆ ಮಾದರಿಯನ್ನಾಗಿ ನೀಡಿದರು. ನಮ್ಮ ಸಂವಿಧಾನದ ಆಶಯಗಳಿಗೆ ಅವರ ಚಿಂತನೆಗಳು ಅತ್ಯಂತ ಸಮರ್ಥನೀಯವಾದ ನೆಲೆ ಒದಗಿಸಿವೆ. ಈ ಹಿನ್ನೆಲೆಯಲ್ಲಿ ಸರಕಾರದ ಈ ಕ್ರಮ ಅತ್ಯಂತ ಸ್ತುತ್ಯಾರ್ಹ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಉಪತಹಸೀಲ್ದಾರ ಪಿ.ಬಿ. ಕಿಮಾಯಿ, ಪಶುವೈದ್ಯಾಧಿಕಾರಿ ಡಾ.ಎನ್.ಎಂ. ಹವಳದ, ಆರೋಗ್ಯ ಇಲಾಖೆಯ ಬಿ.ಎಸ್. ಹಿರೇಮಠ, ದೈಹಿಕ ಶಿಕ್ಷಣ ಪರಿವೀಕ್ಷಣಾಧಿಕಾರಿ ಎಂ.ಎಂ. ಹವಳದ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಂದಾ ನವಲೆ, ತಾಲೂಕಿನ ಎಲ್ಲ ಗ್ರಾಮಾಡಳಿತಾಧಿಕಾರಿಗಳು, ತಾಲೂಕಾ ಹಂತದ ಸಿಬ್ಬಂದಿ, ಕಾರ್ಯಾಲಯದ ಸಿಬ್ಬಂದಿ, ಸ್ಥಳೀಯ ಅಂಗನವಾಡಿ ಸಿಬ್ಬಂದಿ ಇದ್ದರು. ಗ್ರಾಮಾಡಳಿತಾಧಿಕಾರಿ ನಿರ್ಮಲಾ ಕೊಪ್ಪದಮಠ ವಂದಿಸಿದರು.

# ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ರಾಜ್ಯ ಸರ್ಕಾರ ವಿಶ್ವಗುರು ಬಸವೇಶ್ವರರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದಲ್ಲದೇ ದಿ.17ರಂದು ವಿಧಾನಸೌಧ ಹಾಗೂ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬಸವೇಶ್ವರ ಭಾವಚಿತ್ರ ಅನಾವರಣಗೊಳಿಸಲು ಕರೆ ನೀಡಿತ್ತು. ಈ ಹಿನ್ನೆಲೆಯಲ್ಲಿ ನಗರದ ಹತ್ತಿಕಾಳ ಕೂಟದಲ್ಲಿರುವ ಬಸವೇಶ್ವರ ವೃತ್ತದಲ್ಲಿ ಬಸವಪರ ಸಂಘಟನೆಗಳ ಸದಸ್ಯರು ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.



ಬಸವಪರ ನಿರ್ಣಯಗಳನ್ನು ಕೈಗೊಂಡ ಮುಖ್ಯಮಂತ್ರಿ ಸಿದ್ಧರಾಮಯ್ಯನವರನ್ನು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಬಸವಾನುಯಾಯಿಗಳು ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿಯ ಎಸ್.ಎನ್. ಬಳ್ಳಾರಿ, ಎಂ.ಎಸ್. ಅಂಗಡಿ, ಶರೀಫ ಬಿಳೆಎಲಿ, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಕೆ.ಎಸ್. ಚಟ್ಟಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ, ಬಸವದಳ ಉಪಾಧ್ಯಕ್ಷ ಪ್ರಕಾಶ ಅಸುಂಡಿ, ಶರಣ ಸಾಹಿತ್ಯ ಪರಿಷತ್ ಕಾರ್ಯದರ್ಶಿ ರಾಜಶೇಖರ ದಾನರಡ್ಡಿ, ನಗರಸಭೆ ಸದಸ್ಯರಾದ ವಿನಾಯಕ ಮಾನ್ವಿ, ಶಿವಕುಮಾರ ರಾಮನಕೊಪ್ಪ, ಎಂ.ಎಸ್. ಪರ್ವತಗೌಡ್ರ, ಎನ್.ಎಂ. ಪವಾಡಿಗೌಡ್ರ, ಎಂ.ಬಿ. ಲಿಂಗದಾಳ, ವಿ.ಬಿ. ಕಾಮಣ್ಣವರ, ಮುರುಘೇಶ ಬಡ್ನಿ ಸೇರಿದಂತೆ ಲಿಂಗಾಯತ ಪ್ರಗತಿಶೀಲ ಸಂಘ, ಬಸವದಳ–ಬಸವಕೇಂದ್ರ, ಜಾಗತಿಕ ಲಿಂಗಾಯತ ಮಹಾಸಭಾ, ಶರಣ ಸಾಹಿತ್ಯ ಪರಿಷತ್ ಸೇರಿದಂತೆ ವಿವಿಧ ಬಸವಪರ ಸಂಘಟನೆಗಳ ಸದಸ್ಯರು ಭಾಗವಹಿಸಿದ್ದರು.

# ಸಾಧಕರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಎಸ್‌ಎಸ್‌ಕೆ ಜಗದಂಬಾ ಶಿಕ್ಷಣ ಕೇಂದ್ರದ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಯುವ ಕಾಂಗ್ರೆಸ್ ಧುರೀಣ ಕೃಷ್ಣಗೌಡ ಎಚ್.ಪಾಟೀಲ, ರಂಗನಾಥಸಾ ಬಿ. ಬಾಕಳೆ ಡಾ. ಸುನಿಲ್ ಹಬೀಬರನ್ನು ಎಸ್‌ಎಸ್‌ಕೆ ಸಮಾಜದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಜಗದಂಬಾ ಶಿಕ್ಷಣ ಕೇಂದ್ರದ



ಅಧ್ಯಕ್ಷ ಫಕೀರಸಾ ಭಾಂಡಗೆ, ಉಪಾಧ್ಯಕ್ಷ ರಾಜು ಯ.ಬದಿ, ಸಹ ಗೌರವ ಕಾರ್ಯದರ್ಶಿ ವಿನೋದ್ ಶಿದ್ಲಿಂಗ, ರವಿ ಶಿದ್ಲಿಂಗ, ಸ್ಕೂಲ್ ಕಮಿಟಿ ಚೇರ್ಮನ್ ಶ್ರೀನಿವಾಸ್ ಬಿ.ಖಟವಟೆ, ವೈಸ್ ಚೇರ್ಮನ್ ವಿಶ್ವನಾಥ ಎನ್.ಖಟವಟೆ, ಪಂಚ ಕಮಿಟಿಯ ಸದಸ್ಯರಾದ ವಿಷ್ಣು ಎಂ.ಶಿದ್ಲಿಂಗ, ಪರಶುರಾಮ ಬದಿ, ಮಹಿಳಾ ಮಂಡಳದ ಅಧ್ಯಕ್ಷೆ ರೇಖಾ ಖಟವಟೆ, ಆರ್.ಎನ್. ಬಡಿಗೇರ್, ರವಿ ಬಡಿಗೇರ್, ಎಸ್.ಎಂ. ಹಳ್ಳದ್, ರವಿ ಕೊಟೆ, ರಂಜಿತ್ ಮುಂತಾದವರಿದ್ದರು.

# ಕೆಂಚಮ್ಮದೇವಿ ಪ್ರತಿಷ್ಠಾಪನಾ ಕಾರ್ಯ ಆರಂಭ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಸಾಯಿಬಣ ವ್ಯಾಪ್ತಿಯ ಮುಕ್ತಿಮಂದಿರ ರಸ್ತೆಯಲ್ಲಿರುವ ಪುರಾತನ ಅತ್ತಿಮರದ ಕೆಂಚಮ್ಮದೇವಿ ಬಯಲು ದೇವಸ್ಥಾನವನ್ನು ಕುಲಕರ್ಣಿ ಕುಟುಂಬದವರು ಮತ್ತು ಭಕ್ತರು ಜೀರ್ಣೋದ್ಧಾರಗೊಳಿಸಿದ್ದು, ಶನಿವಾರ ದೇವಸ್ಥಾನದ ಉದ್ಘಾಟನೆ ಮತ್ತು ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮಗಳು ಪ್ರಾರಂಭಗೊಂಡವು.

ಶನಿವಾರ ಪಟ್ಟಣದ ಶಿಗ್ಲಿನಾಕಾ ಬಳಿ ಇರುವ ಹನುಮಂತದೇವರ ದೇವಸ್ಥಾನದಿಂದ ಶ್ರೀ ಕೆಂಚಮ್ಮದೇವಿ ಮೂರ್ತಿಯ ಭವ್ಯ ಮೆರವಣಿಗೆಯು ಪ್ರಾರಂಭವಾಯಿತು. ನೂರಾರು ಸಂಖ್ಯೆಯಲ್ಲಿ ಪೂರ್ಣಕುಂಭಗಳನ್ನು ಹೊತ್ತ ಮಹಿಳೆಯರು, ಡೊಳ್ಳು ಕುಣಿತ, ಕುದರೆಕಾರರ ಕುಣಿತ, ದೇವಿ ಆರಾಧಕ ಮಹಿಳೆಯರು, 11 ಜೊತೆ ಎತ್ತುಗಳು ಹಾಗೂ ಅಲಂಕರಿಸಲಾಗಿದ್ದ ಎತ್ತಿನ ಬಂಡಿಯಲ್ಲಿ ದೇವಿಯ ಮೂರ್ತಿಯ ಮೆರವಣಿಗೆಯು ಅದ್ದೂರಿಯಾಗಿ ಪ್ರಾರಂಭವಾಯಿತು.

ಅಲ್ಲಿಂದ ಪಾದಗಟ್ಟಿ, ಬಜಾರ ರಸ್ತೆ, ಹಾವಳಿ ಹನುಮಂತದೇವರ ದೇವಸ್ಥಾನ, ಮ್ಯಾಗೇರಿ ಓಣಿ, ಪಂಪ ಸರ್ಕಲ್ ಮೂಲಕ ಹಾಯ್ದು ಪ್ರತಿಷ್ಠಾಪನೆ ಸ್ಥಳಕ್ಕೆ ತಲುಪಿತು. ಮದ್ಯಾಹ್ನ ಕುಂದಗೋಳದ ಹನುಮಂತಭಟ್ ಜೋಶಿ ಮತ್ತು ಕಳಸದ ನರಸಿಂಹಭಟ್ ಜೋಶಿ ಇವರ ನೇತೃತ್ವದಲ್ಲಿ ಶ್ರೀದೇವಿಯ ಧಾನ್ಯಾಧಿವಾಸ, ಜಲಾಧಿವಾಸ, ಶಯ್ಯಾಧಿವಾಸ, ನವಗ್ರಹ ಸಹಿತ ವಾಸ್ತುಹೋಮ, ಪೂರ್ವಾಂಗ ಪ್ರತಿಷ್ಠಾಪನೆ ಹೋಮ ಇತ್ಯಾದಿಗಳು ಸಂಪ್ರದಾಯದಂತೆ ವಿದ್ಯುಕ್ತವಾಗಿ ನೆರವೇರಿದವು.

ರವಿವಾರ ಬೆಳಿಗ್ಗೆ ಬ್ರಾಹ್ಮೀ ಮುಹೂರ್ತದಲ್ಲಿ ದೇವಿಗೆ ಉತ್ತರಾಂಗ ಹೋಮ, ಪ್ರತಿಷ್ಠಾಪನೆ ವಿಧಿ, ಪೂರ್ಣಾಹುತಿ, ಮಹಾಮಂಗಳಾರತಿ ಜರುಗಲಿದೆ. ನಂತರ 11.30ಕ್ಕೆ ಸಭಾ ಕಾರ್ಯಕ್ರಮ ನೆರವೇರಲಿದೆ. ಧರ್ಮದರ್ಶಿಗಳಾದ ರಾಮಚಂದ್ರ ಕುಲಕರ್ಣಿ, ವಿಜಯೇಂದ್ರ ಕುಲಕರ್ಣಿ, ಮಧುಸೂಧನ ಕುಲಕರ್ಣಿ, ಶುಭಾ ಕುಲಕರ್ಣಿ, ವಕೀಲರಾದ ವಿ.ಎಲ್. ಪೂಜಾರ, ಓಂಕಾರ್, ನಾರಾಯಣಭಟ್ ಪುರಾಣಿಕ, ಕೆ.ಎಸ್. ಕುಲಕರ್ಣಿ, ಗುರಣ್ಣ ಪಾಟೀಲಕುಲಕರ್ಣಿ, ಶಂಕರ ಬೆಟಗೇರಿ, ಧೃವ ಬೆಟಗೇರಿ, ಅರವಿಂದ ದೇಶಪಾಂಡೆ, ಪುರಸಭೆ ಸದಸ್ಯ ಮಹೇಶ ಹೊಗೆಸೊಪ್ಪಿನ, ಶೇಖಪ್ಪ ಮೂಲಿಮನಿ ಮುಂತಾದವರಿದ್ದರು.


## ಮಹಿಳೆಯರ, ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಕಾಯ್ದೆಯ ತರಬೇತಿ ಕಾರ್ಯಕ್ರಮ

# ಸಿಬ್ಬಂದಿಗಳು ಚಾಕಚಕ್ಯತೆಯಿಂದ ಕಾರ್ಯನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಶುಕ್ರವಾರ ಜಿಲ್ಲಾಡಳಿತ ಭವನದ ಸಭಾಭವನದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಹಾಗೂ ಐಟಿಪಿಎ 1956 ಕಾಯ್ದೆಯ ಕುರಿತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಭಾಗೀದಾರರಿಗೆ ಮತ್ತು ಕಾವಲು ಸಮಿತಿ ಸದಸ್ಯರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಅನ್ನಪೂರ್ಣ ಗಾಣಗೇರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಂದಿನ ಆಧುನಿಕ ಯುಗದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಒಂದು ಹೇಯ ಕೃತ್ಯವಾಗಿದೆ. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಯಲು ಸಂಬಂಧಪಟ್ಟ ಅಧಿಕಾರಿಗಳು ಮತ್ತು



ಸಾಂದರ್ಭಿಕ ಚಿತ್ರ

ಸಿಬ್ಬಂದಿಗಳು ಚಾಕಚಕ್ಯತೆಯಿಂದ ಕಾರ್ಯನಿರ್ವಹಿಸಬೇಕಾಗಿದೆ. ಅದಕ್ಕಾಗಿ ಈ ತರಬೇತಿಯ ಸದುಪಯೋಗ ಪಡೆದುಕೊಳ್ಳುವಂತೆ ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಡಾ. ಕಮಲವ್ವ ಬೈಲೂರ ಸ್ವಾಗತ ಮತ್ತು ಪ್ರಸ್ತಾವಿಕ ನುಡಿಗಳನ್ನಾಡಿ, ಇಂದಿನ ದಿನಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಅಂಕಿ–ಸಂಖ್ಯೆಗಳನ್ನು ನೋಡಿದಾಗ ಆತಂಕವಾಗುವಂತಿದೆ. ಎಲ್ಲಾ ಇಲಾಖೆಯ ಸಹಕಾರದೊಂದಿಗೆ ಇಂತಹ ಪ್ರಕರಣಗಳಾಗದಂತೆ ತಡೆಗಟ್ಟುವ ಅವಶ್ಯಕತೆ ಇದೆ ಎಂದು ತಿಳಿಸಿದರು.

> ಅಧ್ಯಕ್ಷತೆ ವಹಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಮಾತನಾಡಿ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆಯು ಕೇವಲ ಒಂದು ಪ್ರದೇಶದಲ್ಲಿರದೇ ಅದು ಜಿಲ್ಲೆ, ರಾಜ್ಯ, ರಾಷ್ಟ್ರ, ಅಂತಾರಾರಾಷ್ಟ್ರೀಯ ಮಟ್ಟದಲ್ಲಿ ಕಾರ್ಯಪ್ರವೃತ್ತವಾಗಿದೆ. ಸಂಬಂಧಪಟ್ಟ ಇಲಾಖೆ ಮತ್ತು ಸಮಾಜದ ಪ್ರಮುಖ ವ್ಯಕ್ತಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಅಂತಹ ದುಷ್ಟ ಕಾರ್ಯವನ್ನು ಸಂಪೂರ್ಣವಾಗಿ ನಾಶ ಮಾಡಬೇಕಾಗಿದೆ. ಅದಕ್ಕಾಗಿ ಇಂತಹ ತರಬೇತಿ ಅವಶ್ಯವಾಗಿದ್ದು, ಸಂಪನ್ಮೂಲ ವ್ಯಕ್ತಿಗಳಿಂದ ಕಾಯ್ದೆ–ಕಾನೂನುಗಳ ಬಗ್ಗೆ ಅರ್ಥೈಸಿಕೊಂಡು ಎಲ್ಲಾ ಕಡೆ ಕಾರ್ಯಪ್ರವೃತ್ತರಾಗಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಜಿ.ಮಣ್ಣೂರ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆಯು ಯಾವ ಯಾವ ರೀತಿಯಲ್ಲಿ ಆಗುತ್ತಿದೆ ಎಂದು ವಿವರಿಸಿ, ಗ್ರಾಮ ಮಟ್ಟದಿಂದಲೇ ಅದನ್ನು ತಡೆಯಲು ಕ್ರಮ ಕೈಗೊಳ್ಳುವುದು ಅವಶ್ಯಕವಿದ್ದು, ಸಂಬಂಧಪಟ್ಟ ಅಧಿಕಾರಿಗಳು ತರಬೇತಿಯನ್ನು ಯಶಸ್ವಿಯಾಗಿ ಪಡೆಯಲು ತಿಳಿಸಿದರು.

ಕಾರ್ಯಕ್ರಮಕ್ಕೆ ಶಹರ ಪೋಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಡಿ.ಬಿ. ಪಾಟೀಲ್ ಉಪನ್ಯಾಸಕರಾಗಿ ಆಗಮಿಸಿ ಮಾತನಾಡಿ, ಸವಿವರವಾಗಿ ಮಾಹಿತಿ ನೀಡಿದರು. ವಕೀಲರಾದ ಪ್ರಕಾಶ ವಾಲಿ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಹಾಗೂ ITPA,1956 ಕಾಯ್ದೆಯ ಕುರಿತು ಸವಿವರವಾಗಿ ತಿಳಿಸಿದ್ದಲ್ಲದೆ ವಿವಿಧ ಇಲಾಖೆಗಳ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಮಾಹಿತಿ ನೀಡಿದರು.

ಸುನೀತಾ ನಾಡಿಗೇರ್ ಕಾರ್ಯಕ್ರಮ ನಿರೂಪಿಸಿದರು. ಪ್ರಭಾವತಿ ಮುದಿಗೌಡ್ರ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka